# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 Issue : 97 FRIDAY 19-06-2026 PRGI No : KNKAN/26/A0962 Pages:4 Rs.2.00 M: 9742418836


## ಕಚ್ಚಾ ತೈಲ ದರ ಇಳಿದ ತಕ್ಷಣ ಇಂಧನ ಬೆಲೆ ಇಳಿಯಲ್ಲ



ತ್ರಿಶೂರ್ (ಕೇರಳ): ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಕಡಿಮೆಯಾದ ತಕ್ಷಣವೇ ದೇಶದಲ್ಲಿ ಇಂಧನ ಬೆಲೆಯನ್ನು ಕಡಿತಗೊಳಿಸಲು ಸಾಧ್ಯವಿಲ್ಲ ಎಂದು ಪೆಟ್ರೋಲಿಯಂ ಸಚಿವಾಲಯದ ರಾಜ್ಯ ಖಾತೆ ಸಚಿವ ಸುರೇಶ್ ಗೋಪಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಅಗ್ಗದ ಕಚ್ಚಾ ತೈಲವು ಹೊರ್ಮುಜ್ ಜಲಸಂಧಿಯ ಮೂಲಕ ಭಾರತಕ್ಕೆ ರವಾನೆಯಾಗಬೇಕಿದೆ. ಜಲಮಾರ್ಗದಲ್ಲಿ ಹಡಗುಗಳ ಸಂಚಾರ ದಟ್ಟಣೆ ಹೆಚ್ಚಿರುತ್ತದೆ. ಆದ್ದರಿಂದ ಈ ತೈಲ ಭಾರತಕ್ಕೆ ಬರಲು ಸಮಯ ತೆಗೆದುಕೊಳ್ಳುತ್ತದೆ' ಎಂದು ತಿಳಿಸಿದ್ದಾರೆ.

ಈಚೆಗೆ ಇಂಧನ ಬೆಲೆ ಪ್ರತಿ ಲೀಟಗೆರ್‌ಗೆ 3.94 ರೂಪಾಯಷ್ಟು ಹೆಚ್ಚಳದಿಂದಾಗಿ ಪರಿಣಾಮ ಬೀರಿದೆ. ಆದರೆ, ಜಾಗತಿಕವಾಗಿ ಕಚ್ಚಾ ತೈಲದ ಬೆಲೆ ಇಳಿಕೆಯಾಗಿದೆ ಎಂಬ ಒಂದೇ ಕಾರಣಕ್ಕೆ ದರ ಪರಿಷ್ಕರಣೆ ಮಾಡಲು ಸಾಧ್ಯವಿಲ್ಲ ಎಂದಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿ ಯುದ್ಧ ಪ್ರಾರಂಭವಾದಾಗಿನಿಂದ ತೈಲ ಕಂಪನಿಗಳು ದೊಡ್ಡ ಮಟ್ಟದಲ್ಲಿ ತೊಂದರೆಗೆ ಸಿಲುಕಿದ್ದವು. ತೈಲ ಕಂಪನಿಗಳ ಹೊರೆಯನ್ನು ತಗ್ಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು 12 ಸಾವಿರ ಕೋಟಿ ರೂಪಾಯಿಯಷ್ಟು ನಷ್ಟವನ್ನು ಭರಿಸಿದೆ ಎಂದು ಹೇಳಿದ್ದಾರೆ.

ಇಂಧನ ಬೆಲೆ ಹೆಚ್ಚಾಗಿದ್ದಾಗ ಯಾವುದೇ ರಾಜ್ಯ ಸರ್ಕಾರ ಅಬಕಾರಿ ಸುಂಕವನ್ನು ಕಡಿಮೆ ಮಾಡುವ ಮೂಲಕ ತನ್ನ ಆದಾಯವನ್ನು ಬಿಟ್ಟುಕೊಡಲಿಲ್ಲ. ಕೇಂದ್ರ ಸರ್ಕಾರವೂ ನಡೆಯಬೇಕು ಮತ್ತು ತೈಲ ಕಂಪನಿಗಳೂ ಉಳಿಯಬೇಕು ಎಂದು ಅವರು ಪ್ರತಿಪಾದಿಸಿದ್ದಾರೆ.

## ನಾವು ಒಂದು ಬಕೆಟ್ ನೀರು ಬಳಸಲ್ಲ: ಮೇಕೆದಾಟು ಯೋಜನೆಯಿಂದ ಕರ್ನಾಟಕಕ್ಕಿಂತ TN ರೈತರಿಗೆ ಹೆಚ್ಚು ಪ್ರಯೋಜನ: ಸಿಎಂ ಶಿವಕುಮಾರ್

ಬೆಂಗಳೂರು: ಪ್ರಸ್ತಾವಿತ ಮೇಕೆದಾಟು ಅಣ್ಣೆಕಟ್ಟು ಯೋಜನೆಯನ್ನು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತೆ ಸಮರ್ಥಿಸಿಕೊಂಡಿದ್ದು, ಇದು ಕರ್ನಾಟಕಕ್ಕಿಂತ ತಮಿಳುನಾಡಿಗೆ ಹೆಚ್ಚು ಪ್ರಯೋಜನವನ್ನು ನೀಡುತ್ತದೆ. ಸುಪ್ರೀಂ ಕೋರ್ಟ್ ಆದೇಶದಂತೆ ನೆರೆಯ ರಾಜ್ಯಕ್ಕೆ 177 ಟಿಎಂಸಿ ಕಾವೇರಿ ನೀರನ್ನು ಬಿಡುಗಡೆ ಮಾಡಲು ರಾಜ್ಯವು ಬದ್ಧವಾಗಿದೆ ಎಂದು ಪುನರುಚ್ಚರಿಸಿದರು. ಕಾವೇರಿ ನದಿಗೆ ಮೇಕೆದಾಟು ಅಣೆಕಟ್ಟು ನಿರ್ಮಿಸುವ ಕರ್ನಾಟಕದ ಪ್ರಯತ್ನವನ್ನು ತಡೆಯುವ ಸಲುವಾಗಿ ತಮಿಳುನಾಡು ರಾಜ್ಯಪಾಲ ಆರ್ ವಿ ಅರ್ಲೇಕರ್ ಅವರು ರಾಜ್ಯ ವಿಧಾನಸಭೆಯಲ್ಲಿ ಮಾಡಿದ ಭಾಷಣಕ್ಕೆ ಪ್ರತಿಕ್ರಿಯಿಸಿದ ಶಿವಕುಮಾರ್, ಮೇಕೆದಾಟು ಯೋಜನೆ ದಕ್ಷಿಣ ಭಾರತದ ಹೃದಯದಂತ ಯೋಜನೆ. ಈ ಯೋಜನೆಯಲ್ಲಿ ಕರ್ನಾಟಕ ಹಾಗೂ ತಮಿಳುನಾಡಿನ ಹಿತ ಅಡಗಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ತಮಿಳುನಾಡು ಸರ್ಕಾರ ನಿಮ್ಮ ಹೃದಯಕ್ಕೆ ಹತ್ತಿರವಾದ ಮೇಕೆದಾಟು ಯೋಜನೆ ತಡೆಯಲು ಕಾನೂನು ಅವಕಾಶ ಹುಡುಕುತ್ತಿದೆ ಎಂದು ಕೇಳಿದಾಗ, ಮೇಕೆದಾಟು ಕೇವಲ ನನ್ನ ಹೃದಯಕ್ಕೆ ಮಾತ್ರ ಹತ್ತಿರವಾಗಿಲ್ಲ. ಮೇಕೆದಾಟು ಯೋಜನೆ ಕರ್ನಾಟಕ ರಾಜ್ಯಕ್ಕಿಂತ ತಮಿಳುನಾಡಿಗೆ ಹೆಚ್ಚು ಅನುಕೂಲ





ನೀಡಲಿದೆ. ತಮಿಳುನಾಡು ಪಾಲಿನ 177 ಟಿಎಂಸಿ ನೀರನ್ನು ಬಿಡಲು ನಾವು ಸಿದ್ಧವಾಗಿದ್ದೇವೆ. ಈ ಬಗ್ಗೆ ಸುಪ್ರೀಂ ಕೋರ್ಟ್ ಆದೇಶವೂ ಇದೆ. ಈ ಯೋಜನೆ ತೀರ್ಮಾನವನ್ನು ಕೇಂದ್ರ ಜಲ ಆಯೋಗ ಮಾಡಬೇಕು ಎಂದು ಕೋರ್ಟ್ ತಿಳಿಸಿದೆ ಎಂದು ತಿಳಿಸಿದರು.

**ಒಂದೇ ಒಂದು ಬಕೆಟ್ ನೀರನ್ನೂ ನೀರಾವರಿಗೆ ಬಳಸುವುದಿಲ್ಲ**

ನಾವು ತಮಿಳುನಾಡಿನ ರೈತರ ಹಿತವನ್ನೂ ಕಾಪಾಡಬೇಕು. ಇದು ಸಮತೋಲಿತ ಜಲಾನಯನ. ಇಲ್ಲಿ ಒಂದೇ ಒಂದು ಬಕೆಟ್ ನೀರನ್ನೂ ನೀರಾವರಿಗೆ ಬಳಸುವುದಿಲ್ಲ. ಬೆಂಗಳೂರು ನಗರದ ಕುಡಿಯುವ ನೀರು ಪೂರೈಕೆಗೆ ಮಾತ್ರ ಬಳಸಲಾಗುವುದು. ಬೆಂಗಳೂರಿನಲ್ಲಿ ಜನಸಂಖ್ಯೆ ಹೆಚ್ಚಾಗುತ್ತಿದ್ದು, ನಾವು ಕೃಷ್ಣಾದಿಂದ ನೀರನ್ನು ತರಲು ಸಾಧ್ಯವಿಲ್ಲ. ಹೀಗಾಗಿ ಕಾವೇರಿ ನಮ್ಮ ಮುಂದಿರುವ ಏಕೈಕ ಆಯ್ಕೆ" ಎಂದು ತಿಳಿಸಿದರು. ಮೇಕೆದಾಟು ಯೋಜನೆ ರದ್ದುಗೊಳಿಸಲು ಪ್ರಧಾನಿ ಮೋದಿ ಅವರಿಗೆ ಮನವಿ ಮಾಡಿರುವ ಬಗ್ಗೆ ಕೇಳಿದಾಗ, "ತಮಿಳುನಾಡಿನವರು ಕಳೆದ 40 ವರ್ಷಗಳಿಂದ ರಾಜಕೀಯ ಅಜೆಂಡಾ ಇಟ್ಟುಕೊಂಡಿದ್ದಾರೆ. ಅವರ ರಾಜಕೀಯದಲ್ಲಿ ನಾನು ಹಸ್ತಕ್ಷೇಪ ಮಾಡುವುದಿಲ್ಲ. ಈ ವಿಚಾರದ ಬಗ್ಗೆ ನ್ಯಾಯಾಲಯ ನಿರ್ದೇಶನ ನೀಡಿದೆ. ಕಳೆದ ವರ್ಷ 400ಕ್ಕೂ ಹೆಚ್ಚು ಟಿಎಂಸಿ ಹೆಚ್ಚುವರಿ ನೀರು ಸಮುದ್ರ ಸೇರಿದೆ. ಅವರು ಕೆಳ ಹಂತದಲ್ಲಿ ಸಾಕಷ್ಟು ಅಣೆಕಟ್ಟು ನಿರ್ಮಾಣ ಮಾಡುತ್ತಿದ್ದು, ನಾವು ಯಾವುದಕ್ಕೂ ಆಕ್ಷೇಪ ವ್ಯಕ್ತಪಡಿಸಿಲ್ಲ. ಅವರ ನೆಲದಲ್ಲಿ ಅವರು ನಿರ್ಮಿಸಿಕೊಳ್ಳುತ್ತಿದ್ದಾರೆ. ಇದೇ ವಿಚಾರ ಸುಪ್ರೀಂ ಕೋರ್ಟ್ ನಲ್ಲೂ ಚರ್ಚೆಯಾಗಿದೆ. ಈ ಯೋಜನೆಗೆ ನಾವು ಯಾವುದೇ ಆರ್ಥಿಕ ನೆರವಾಗಲಿ ಇತರೆ ವಿಚಾರವನ್ನು ಕೇಳುತ್ತಿಲ್ಲ. ಈ ಯೋಜನೆಯಿಂದ 400 ಮೆ.ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವುದು ಇಂಧನ ಕ್ಷೇತ್ರದಲ್ಲಿ ನಮಗೆ ಅನುಕೂಲ ಮಾಡಿಕೊಡಲಿದೆ" ಎಂದರು.

**ತಮಿಳುನಾಡು ಜೊತೆ ಯಾವಾಗ ಬೇಕಾದರೂ ಚರ್ಚೆಗೆ ಸಿದ್ಧ**

ಈ ವಿಚಾರವಾಗಿ ತಮಿಳುನಾಡು ಜೊತೆ ಚರ್ಚೆ ಮಾಡುತ್ತೀರಾ ಎಂದು ಕೇಳಿದಾಗ, ಯಾವಾಗ ಬೇಕಾದರೂ ಅವರ ಜೊತೆ ಮಾತನಾಡಲು ಸಿದ್ಧನಿದ್ದೇನೆ, ತಮಿಳುನಾಡು, ಕರ್ನಾಟಕದವರು ಭಾರತೀಯರು. ನಾವು ಕಾವೇರಿ ನೀರು ಕುಡಿಯಬೇಕು. ತಮಿಳುನಾಡಿನಿಂದ ಇಲ್ಲಿಗೆ ಬಂದು ವೃತ್ತಿ ಮಾಡುತ್ತಿರುವ ಅನೇಕ ಜನರಿದ್ದಾರೆ. ಇಲ್ಲಿಂದ ಹೋಗಿ ಅಲ್ಲಿ ಕೆಲಸ ಮಾಡುತ್ತಿರುವವರೂ ಇದ್ದಾರೆ. ನಾವು ಅವರನ್ನು ಪ್ರತ್ಯೇಕಿಸುವುದಿಲ್ಲ. ಸಮತೋಲಿತ ಜಲಾನಯನ ನಿರ್ಮಾಣದಿಂದ ಕಷ್ಟ ಕಾಲದಲ್ಲಿ ತಮಿಳುನಾಡಿನ ಪಾಲಿನ ನೀರನ್ನು ಹರಿಸಲು ನೆರವಾಗುತ್ತದೆ. ಅತಿ ಕಡಿಮೆ ವೆಚ್ಚದಲ್ಲಿ ಯೋಜನೆ ಆಗುವ ವಿಶ್ವಾಸವಿದೆ" ಎಂದು ತಿಳಿಸಿದರು.

## ಮತದಾರರ ಪಟ್ಟಿ ಪರಿಷ್ಕರಣೆ: ಬಿಜೆಪಿ ಕಾರ್ಯಕರ್ತರಿಗೆ ತರಬೇತಿ

**ಬೆಳಗಾವಿ ವಾರ್ತೆ ಗೋಕಾಕ:** ಅರ್ಹ ಮತದಾರರು ತಮ್ಮ ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಎಲ್ಲರೂ ಜಾಗರೂಕರಾಗಿ ಕಾರ್ಯನಿರ್ವಹಿಸಬೇಕು. ಬಿಎಲ್‌ಒ–2 ಕಾರ್ಯಕರ್ತರು ತಮ್ಮ ವ್ಯಾಪ್ತಿಯ ಪ್ರತಿಯೊಬ್ಬ ಮತದಾರರ ಮಾಹಿತಿಯನ್ನು ಸಮರ್ಪಕವಾಗಿ ಪರಿಶೀಲಿಸಿ, ಅಗತ್ಯ ತಿದ್ದುಪಡಿಗಳನ್ನು ಮಾಡಿಸಬೇಕು ಎಂದು ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಅವರು, ನಗರದ ನಗರಸಭೆ ಸಮುದಾಯ ಭವನದಲ್ಲಿ ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದಿಂದ ಮತದಾರರ ಪಟ್ಟಿಯನ್ನು ಪರಿಷ್ಕರಿಸಲು ಕರೆಯಲಾಗಿದ್ದ ಎಸ್‌ಐಆರ್ ವಿಶೇಷ ಸಭೆಯನ್ನುದ್ದೇಶಿಸಿ ಮಾತನಾಡಿ, ಪ್ರತಿ ಬೂತ್ ಮಟ್ಟದಲ್ಲಿ ನೇಮಕಗೊಂಡಿರುವ ಬಿಎಲ್‌ಎ–2 ಕಾರ್ಯಕರ್ತರು ಒಂದೇ ಹೆಸರಿನ ಅನೇಕ ವ್ಯಕ್ತಿಗಳು ಒಂದೇ ಗ್ರಾಮ ಅಥವಾ ಪ್ರದೇಶದಲ್ಲಿ ವಾಸಿಸುವ ಸಂದರ್ಭಗಳಲ್ಲಿ ಹೆಸರು, ತಂದೆಯ ಹೆಸರು, ವಿಳಾಸ ಸೇರಿದಂತೆ ಅಗತ್ಯ ಮಾಹಿತಿಗಳನ್ನು ಸರಿಯಾಗಿ ದಾಖಲಿಸದಿದ್ದರೆ ಮತದಾರರ ಪಟ್ಟಿಯಲ್ಲಿ ಗೊಂದಲ ಉಂಟಾಗುವ ಸಾಧ್ಯತೆಗಳಿದ್ದು ಪ್ರತಿಯೊಬ್ಬ ಅರ್ಹ ಮತದಾರನ ಹೆಸರು ಮತದಾರರ ಪಟ್ಟಿಯಲ್ಲಿ ಸಮರ್ಪಕವಾಗಿ ದಾಖಲಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಪಕ್ಷ ನೀಡಿದ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿಭಾಯಿಸಬೇಕು ಎಂದರು.





ಗೋಕಾಕ: ನಗರದ ನಗರಸಭೆ ಸಮುದಾಯ ಭವನದಲ್ಲಿ ಬಿಜೆಪಿ ನಗರ ಹಾಗೂ ಗ್ರಾಮೀಣ ಮಂಡಲದಿಂದ ಮತದಾರರ ಪಟ್ಟಿಯನ್ನು ಪರಿಷ್ಕರಿಸಲು ಕರೆಯಲಾಗಿದ್ದ ಎಸ್‌ಐಆರ್ ವಿಶೇಷ ಸಭೆಯನ್ನು ಶಾಸಕ ರಮೇಶ ಜಾರಕಿಹೊಳಿ ಉದ್ಘಾಟಿಸುತ್ತಿರುವದು.

ಪ್ರಜಾಪ್ರಭುತ್ವದಲ್ಲಿ ಮತದಾನವು ಪ್ರತಿಯೊಬ್ಬ ಭಾರತೀಯ ನಾಗರಿಕನ ಅಮೂಲ್ಯ ಹಕ್ಕಾಗಿದೆ. ಯಾವುದೇ ಕಾರಣಕ್ಕೂ ಅರ್ಹ ಮತದಾರರು ತಮ್ಮ ಹಕ್ಕಿನಿಂದ ವಂಚಿತರಾಗದಂತೆ ಎಲ್ಲರೂ ಜಾಗೃತಿಯಿಂದ ಕಾರ್ಯನಿರ್ವಹಿಸಬೇಕೆಂದು ಶಾಸಕರು ಮನವಿ ಮಾಡಿದರು.

ಎಸ್‌ಐಆರ್‌ನ್ನು ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳು ವಿರೋಧಿಸಿದವು. ನಮ್ಮ ಬಿಜೆಪಿ ಪಕ್ಷದ ವರಿಷ್ಟರು ಗಂಭೀರವಾಗಿ ತೆಗೆದುಕೊಂಡಿದ್ದರ ಪರಿಣಾಮವಾಗಿ ಪಶ್ಚಿಮ ಬಂಗಾಲದಲ್ಲಿ ಬಿಜೆಪಿ ದಿಗ್ವಿಜಯ ಸಾಧಿಸಿತು. ಅದರಂತೆ ಬರುವ 2028ರ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಧಿಕಾರಕ್ಕೆ ಬರುತ್ತದೆ ಎಂದರು.

ವಿಭಾಗ ಪ್ರಭಾರಿ ಸಂಜಯ ಪಾಟೀಲ, ಬಿಜೆಪಿ ರಾಷ್ಟ್ರೀಯ ಓಬಿಸಿ ಮೋರ್ಚಾ ಕಾರ್ಯಕಾರಿಣಿ ಸದಸ್ಯ ಲಕ್ಷ್ಮಣ ತಪಶಿ, ಗ್ರಾಮೀಣ ಮಂಡಲ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ, ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಬಿಎಲ್‌ಒ–1 ಮಾಣಿಕ ಹಿರಟ್ಟಿ, ಜಿಲ್ಲಾ ಮಹಿಳಾ ಪ್ರಧಾನ ಕಾರ್ಯದರ್ಶಿ ರಾಜಶ್ರೀ ಒಡೆಯರ್, ಜಿಲ್ಲಾ ಯುವ ಮೋರ್ಚ ಪ್ರಧಾನ ಕಾರ್ಯದರ್ಶಿ ಆನಂದ್ ಅತ್ತುಗೋಳ, ಬಿಜೆಪಿ ಮುಖಂಡ ಪ್ರಮೋದ ಜೋಶಿ, ಡಾ.ಕೆ ವಿ ಪಾಟೀಲ್, ಸುರೇಶ್ ಪಾಟೀಲ್, ಸುರೇಶ್ ಪತ್ತಾರ್ ಸೇರಿದಂತೆ ಹಲವಾರು ಪ್ರಮುಖರು, ಪದಾಧಿಕಾರಿಗಳು, ಕಾರ್ಯಕರ್ತರು ಪಾಲ್ಗೊಂಡಿದ್ದರು.

## ಸಾರ್ವಜನಿಕ ಶೌಚಗೃಹ ಬಂದ್: ಭಕ್ತರ ಪರದಾಟ



ಯಲ್ಲಮ್ಮನಗುಡ್ಡದಲ್ಲಿನ ಸಾರ್ವಜನಿಕ ಶೌಚಗೃಹಕ್ಕೆ ಬೀಗ ಜಡಿದಿರುವುದು

**ವರದಿ–ಮಲ್ಲನಗೌಡ ಪಾಟೀಲ**

**ಬೆಳಗಾವಿ ವಾರ್ತೆ ಉಗರಗೋಳ:** ಸವದತ್ತಿ ತಾಲ್ಲೂಕಿನ ಯಲ್ಲಮ್ಮನಗುಡ್ಡದಲ್ಲಿ ಉಗರಗೋಳ ಮಾರ್ಗದಲ್ಲಿದ್ದ ಸಾರ್ವಜನಿಕ ಶೌಚಗೃಹಗಳನ್ನು ಮುಚ್ಚಿದ್ದರಿಂದ ಭಕ್ತರು ಪರದಾಡುತ್ತಿದ್ದಾರೆ. ಆಡಳಿತ ವ್ಯವಸ್ಥೆಗೆ ಹಿಡಿಶಾಪ ಹಾಕುತ್ತಿದ್ದಾರೆ.

ದಕ್ಷಿಣ ಭಾರತದ ಪ್ರಸಿದ್ಧ ಧಾರ್ಮಿಕ ಸವದತ್ತಿಯ ಯಲ್ಲಮ್ಮನಗುಡ್ಡ. ದೇಶದ ನಾನಾ ಭಾಗಗಳಿಂದ ಲಕ್ಷಾಂತರ ಭಕ್ತರು ಆಗಮಿಸುತ್ತಾರೆ. ಅವರಿಗೆ ಶೌಚಗೃಹ ವ್ಯವಸ್ಥೆ ಕಲ್ಪಿಸುವುದು ಆಡಳಿತ ಯಂತ್ರದ ಕೆಲಸ.

ಇದಕ್ಕಾಗಿ ಗುಡ್ಡದ ಹಲವು ಕಡೆಗಳಲ್ಲಿ ಸಾರ್ವಜನಿಕ ಶೌಚಗೃಹಗಳನ್ನು ನಿರ್ಮಿಸಲಾಗಿದೆ. ಅವುಗಳಲ್ಲಿ ಶೌಚಗೃಹ, ಮೂತ್ರಾಲಯ ಮತ್ತ ಸ್ನಾನಗೃಹಗಳಿವೆ.

ಉಗರಗೋಳ ಮಾರ್ಗದಲ್ಲಿದ್ದ ಸಾರ್ವಜನಿಕ ಶೌಚಗೃಹದಲ್ಲಿ ಇವೆಲ್ಲವೂ ಇದ್ದವು. ಗುಡ್ಡಕ್ಕೆ ಬರುವ ಲಕ್ಷಾಂತರ ಭಕ್ತರು ಅವುಗಳನ್ನು ಉಪಯೋಗಿಸುತ್ತಿದ್ದರು.

ಆದರೆ, ಈಗ ಏಕಾಏಕಿಯಾಗಿ ಅವುಗಳಿಗೆ ಬೀಗ ಜಡಿದಿದ್ದರಿಂದ ಭಕ್ತರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.

ಕೆಲವರು ಶೌಚಕ್ಕಾಗಿ ಚೊಂಬು ಹಿಡಿದುಕೊಂಡು ಗುಡ್ಡವೇರುತ್ತಿರುವುದು ಆಡಳಿತ ವ್ಯವಸ್ಥೆ ಅಣಕಿಸುವಂತಿದೆ.

ಕುಡಿಯುವ ನೀರು, ಶೌಚಗೃಹ, ವಸತಿ ಭಕ್ತರಿಗೆ ಅಗತ್ಯವಾಗಿ ಬೇಕಿರುವ ಮೂಲಸೌಕರ್ಯಗಳು. ಏನೇ ತೊಡಕುಗಳಿದ್ದರೂ ಬಗೆಹರಿಸಿ, ಶೌಚಗೃಹಗಳ ಬಾಗಿಲು ತೆರೆಯಬೇಕು. ಅದನ್ನು ಮುಚ್ಚಿ ತೊಂದರೆ ಕೊಡುವ ಕೆಲಸವಾಗಬಾರದು ಎಂಬ ಮಾತು ಕೇಳಿಬರುತ್ತಿದೆ.

ಯಲ್ಲಮ್ಮನಗುಡ್ಡದಲ್ಲಿ ಭಕ್ತರ ಸಂಖ್ಯೆಗೆ ಹೋಲಿಸಿದರೆ, ಹೇಳಿಕೊಳ್ಳುವಷ್ಟು ಮೂಲಸೌಕರ್ಯವೂ ಇಲ್ಲ. ಈಗ ಇರುವ ಸೌಕರ್ಯಗಳನ್ನು ಮುಚ್ಚುತ್ತಿರುವುದು ಆಕ್ರೋಶಕ್ಕೆ ಕಾರಣವಾಗಿದೆ.

ಇತ್ತೀಚೆಗೆ ಹೊಸದಾಗಿ ನೇಮಕಗೊಂಡಿರುವ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಪ್ರಭಾವತಿ ಫಕ್ಕೀರಪುರ ಈ ಬಗ್ಗೆ ಗಮನಹರಿಸಿ, ಶೌಚಗೃಹಗಳನ್ನು ತೆರೆಯಲು ಕ್ರಮ ವಹಿಸಬೇಕು ಎಂಬುದು ಭಕ್ತರ ಆಗ್ರಹ.

## 'ಕಾಲಘಟ್ಟ' ಚಿತ್ರದ 'ಸಮಯವು ನಿನ್ನ ಬದುಕಿನ ಮಾಲಿಕ ಹಾಡು' ಬಿಡುಗಡೆ

**ಬೆಳಗಾವಿ ವಾರ್ತೆ ಬೆಂಗಳೂರು :** ದಿಕ್ಷೀತಾ ಎಂಟರ್ ಪ್ರೈಸಸ್ ಬೆಂಗಳೂರು ಅವರ 'ಕಾಲಘಟ್ಟ' ಕನ್ನಡ ಚಲನಚಿತ್ರದ "ಸಮಯವು ನಿನ್ನ ಬದುಕಿನ ಮಾಲೀಕ, ಕಾಲಕ್ಕೆ ಗೌರವ ಕೊಡಬೇಕು ಜನಕ" ಹಾಡು ಬಿಡುಗಡೆಯಾಗಿ ಯ್ಯೂಟೂಬ್‌ದಲ್ಲಿ ಭರ್ಜರಿ ಸದ್ದು ಮಾಡುತ್ತಿದೆ.

ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಕಥಾಹಂದರ ಹೊಂದಿರುವ 'ಕಾಲಘಟ್ಟ' ಚಿತ್ರದ ಎರಡನೇ ಲಿರಿಕಲ್ ವಿಡಿಯೋ ಸಾಂಗ್ ಬಿಡುಗಡೆಯಾಗಿ 180ಕೆ ವೀಕ್ಷಣೆ ಪಡೆದು ಸಿನಿಪ್ರಿಯರ ಗಮನ ಸೆಳೆಯುತ್ತಿದೆ. ಅರ್ಥಪೂರ್ಣ ಸಾಲುಗಳ ಮೂಲಕ ಸಮಯದ ಮಹತ್ವವನ್ನು ಸಾರುವ ಈ ಹಾಡು ಎಲ್ಲರ ಮನ ಮುಟ್ಟುತ್ತಿದೆ. ಈ ಹಾಡಿಗೆ ಋಷಿ ಸಾಹಿತ್ಯ ರಚಿಸಿದ್ದು, ಗಾಯಕ ಮಹೇಶ ತಮ್ಮ ಮಧುರ ಕಂಠದ ಮೂಲಕ ಹಾಡಿಗೆ ಜೀವ ತುಂಬಿದ್ದಾರೆ.

ಸಂಗೀತ ನಿರ್ದೇಶಕ ಎ.ಎಂ.ನೀಲ್ ಅವರ ಸಂಗೀತ ಸಂಯೋಜನೆ ಹಾಡಿನ ವಿಶೇಷ ಆಕರ್ಷಣೆಯಾಗಿದೆ. "ಕಾಲದ ಮಹತ್ವವನ್ನು ಪ್ರತಿಯೊಬ್ಬರಿಗೂ ನೆನಪಿಸುವ ಉದ್ದೇಶದಿಂದ ಈ ಹಾಡನ್ನು ರೂಪಿಸಿದ್ದೇವೆ. ಯುವಜನತೆಗೆ ಹಾಗೂ ಕುಟುಂಬದ ಎಲ್ಲರಿಗೂ ಇದು ಉತ್ತಮ ಸಂದೇಶ ನೀಡಲಿದೆ" ಎಂದು ನಿರ್ದೇಶಕ ಕೆ.ಪ್ರಕಾಶ ಅಂಬಳೆ ಹೇಳುತ್ತಾರೆ.

ಚಿತ್ರದಲ್ಲಿ ನಾಯಕನಾಗಿ ಅಭಿದಾಸ್ ಹಾಗೂ ನಿತಿಲ್ ಅಭಿನಯಿಸಿದ್ದು, ನಾಯಕಿಯರಾಗಿ ಋಷಿ ಮತ್ತು ಮೇಘ ಕಾಣಿಸಿಕೊಂಡಿದ್ದಾರೆ. ಚಿತ್ರರಂಗದ ಹಿರಿಯ ಕಲಾವಿದರಾದ ಶೋಭರಾಜ್, ಭವ್ಯ, ರಮೇಶ್ ಭಟ್, ಪ್ರಶಾಂತ್ ರವಿ , ಮಂಡ್ಯ ಸೀತಾರಾಮ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದು , ಕಾಮಿಡಿ ಕಲಾವಿದರು ಹಾಗೂ ಅನೇಕ ರಂಗಭೂಮಿ ಕಲಾವಿದರು ಚಿತ್ರದಲ್ಲಿ ನಟಿಸಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ–ಸದಾಶಿವ ಹಿರೇಮಠ–




ರಾಜ್ ಕಡೂರ್, ಸಂಗೀತ ಎ.ಎಂ.ನೀಲ್, ಸಂಕಲನ ವೆಂಕಿ ಯುಡಿವಿ, ಸಾಹಸ ಮಾಸ್‌ಮಾದ, ಸಾಹಿತ್ಯ ನಮ್ ಋಷಿ, ಸ್ಯಾಂಕಿ, ಸಿದ್ದುಶಿವರಾಮ್, ಪ್ರಸಾಧನ ವಿಜಯ್, ಪಿಆರ್ ಓ– ಹರೀಶ್ ಅರಸು, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ್ ಹಂಡಿಗಿ, ಪ್ರಚಾರ ವಿನ್ಯಾಸ ಆರ್.ಕ್ರಿಯೇಟಿವ್, ನಿರ್ದೇಶನ ತಂಡ ಗಣೇಶ್,ರವಿ, ಸಾಗರ್ ಇದ್ದು, ಕಥೆ–ಚಿತ್ರಕಥೆ–ಸಂಭಾಷಣೆ ಜೊತೆಗೆ ನಿರ್ದೇಶನವನ್ನು ಕೆ. ಪ್ರಕಾಶ್ ಅಂಬಳೆ ಮಾಡಿದ್ದಾರೆ. ಲಯನ್ ಚಿಕ್ಕೇಗೌಡ, ಟಿ.ಸಿ ತಳಗವಾಡಿ ನಿರ್ಮಾಪಕರಾಗಿದ್ದಾರೆ.ಇದೆ ಜೂ.19ರಂದು ಚಿತ್ರ ರಾಜ್ಯಾದ್ಯಂತ ಬಿಡುಗಡೆಯಾಗಲಿದ್ದು ಪ್ರೇಕ್ಷಕರು ಚಿತ್ರಮಂದಿರಗಳಲ್ಲಿ ನೋಡಿ ಪ್ರೋತ್ಸಾಹಿಸಬೇಕೆಂದು ನಿರ್ಮಾಪಕರು ಕೋರಿದ್ದಾರೆ.

## ದಂಡದಲ್ಲಿ ಶೇ.50 ರಷ್ಟು ರಿಯಾಯಿತಿ ಸೌಲಭ್ಯ

ಬಾಗಲಕೋಟೆ: ಬಾಗಲಕೋಟೆ ಪ್ರಾದೇಶಿಕ ಸಾರಿಗೆ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಾಹನ ಮಾಲಿಕರಿಗೆ, ಚಾಲಕರಿಗೆ & ಸಾರಿಗೆ ಇಲಾಖೆ ಸೇವೆ ಪಡೆಯುತ್ತಿರುವವರು 1991–92 ರಿಂದ 2021–22 (31–03–2022)ರ ಅವಧಿಯಲ್ಲಿ ದಾಖಲಾಗಿ ಪಾವತಿಗೆ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿ ಜೂನ್ 21 ರಿಂದ ಜುಲೈ 10 ವರೆಗೆ ಕಾಲಾವಕಾಶವನ್ನು ನೀಡಿ ಸರಕಾರ ಆದೇಶಿದೆ. ಈ ಹಿನ್ನಲೆಯಲ್ಲಿ ಸದರಿ ಅವಧಿಗೆ ದಾಖಲಾಗಿರುವ ಪ್ರಕರಣಗಳ ವಾಹನ ಮಾಲಿಕರು ಬಾಗಲಕೋಟೆ ಪ್ರಾದೇಶಿಕ ಸಾರಿಗೆ ಕಚೇರಿಗೆ ಹಾಜರಾಗಿ ದಂಡದ ಶೇ.50ರಷ್ಟು ರಿಯಾಯಿತಿ ಅವಕಾಶ ಪಡೆದುಕೊಂಡು ಉಳಿದ ಮೊತ್ತ ಪಾವತಿಸಿ ಪ್ರಕರಣ ಇತ್ಯರ್ಥಪಡಿಸಿಕೊಳ್ಳುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜದಲ್ಲಿ ಸತ್ಪ್ರಜೆಗಳನ್ನು ರೂಪಿಸುವಲ್ಲಿ ಶಿಕ್ಷಣ ಸಂಸ್ಥೆಗಳ ಪಾತ್ರ ಹಿರಿದು



**ಬೆಳಗಾವಿ ವಾರ್ತೆ ವಿಜಯಪುರ:** ತಲೆತಲಾಂತರದಿಂದ ಬಂದ ಆಸ್ತಿಗಳನ್ನು ನಮ್ಮ ಹಿರಿಯರು ದಾನ ನೀಡಿದ್ದರ ಫಲವಾಗಿ ಆರಂಭಗೊಂಡ ಶಿಕ್ಷಣ ಸಂಸ್ಥೆಗಳು ಸಮಾಜದಲ್ಲಿ ಸತ್ಪ್ರಜೆಗಳನ್ನು ರೂಪಿಸಿವೆ ಎಂದು ಪಶ್ಚಿಮ ಬಂಗಾಳ ರಾಜ್ಯದಲ್ಲಿ ಆದಾಯ ತೆರಿಗೆ ಇಲಾಖೆ ಮುಖ್ಯ ಪ್ರಧಾನ ಆಯುಕ್ತರಾಗಿರುವ ವಿಜಯಪುರದ ಶ್ರೀನಿವಾಸ ಬಿದರಿ ಹೇಳಿದರು.

ಆದಾಯ ತೆರಿಗೆ ಇಲಾಖೆಯಲ್ಲಿ ಪ್ರಧಾನ ಆಯುಕ್ತರಿಂದ ಮುಖ್ಯ ಪ್ರಧಾನ ಆಯುಕ್ತರೆಂದು ಬಡ್ತಿ ಪಡೆದಿರುವ ಹಿನ್ನೆಲೆಯಲ್ಲಿ ವಿಜಯಪುರದಲ್ಲಿ ಅವರ ಸ್ನೇಹಿತರು, ಶಾಲಾ-ಕಾಲೇಜು ಸಹಪಾಠಿಗಳು ನೀಡಿದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ವಿಜಯಪುರದ ದರ್ಬಾರ್, ಪಿಡಿಜೆ, ಬಿಡಿಇ, ಶ್ರೀ ಸಿದ್ದೇಶ್ವರ ಹೈಸ್ಕೂಲ್ ಎಲ್ಲವೂಗಳು ಸಹ 70-100 ವರ್ಷದ ಹಿಂದೆ ಅಂದಿನ ಹಿರಿಯರು ತಮ್ಮ ತಲೆ ತಲಾಂತರದ ಆಸ್ತಿಯನ್ನು ಈ ನಾಡಿನ ಮಕ್ಕಳ ಭವಿಷ್ಯ ಒಳಿತಾಗಲಿ ಎಂದು ದಾನವಾಗಿ ನೀಡಿದ್ದರು. ಅದರ ಫಲವಾಗಿ ಅಂತಹ ಸಂಸ್ಥೆಗಳಲ್ಲಿ ಕಲಿತ ನಮ್ಮಂಥವರು ಉನ್ನತ ಹುದ್ದೆಗೆ ಹೋಗಲು ಸಾಧ್ಯವಾಯಿತು. ಇದಕ್ಕೆ ಕಾರಣರಾದ ಆ ಹಿರಿಯ ಚೇತನಗಳನ್ನು ಸದಾ ಸ್ಮರಿಸಬೇಕು ಎಂದರು.

ಡಾ.ಮಹಾಂತೇಶ ಬಿರಾದಾರ ಮಾತನಾಡಿ, 1992-93 ರಲ್ಲಿ ವಿಜಯಪುರ ಜಿಲ್ಲೆಯಿಂದ ಐ.ಆರ್.ಎಸ್ ಪಾಸಾದ ಮೊದಲ ವ್ಯಕ್ತಿ ಶ್ರೀನಿವಾಸ ಬಿದರಿ ಆಗಿದ್ದಾರೆ. 34 ವರ್ಷಗಳ ಸುಧೀರ್ಘ ಸೇವೆಯಿಂದ ಇಂದು ಪ್ರಧಾನಮಂತ್ರಿ, ವಿತ್ತ ಮಂತ್ರಿಗಳ ಕಾರ್ಯಪಡೆಯಲ್ಲಿ ದೇಶದ ಆರ್ಥಿಕ ನೀತಿ ನಿರೂಪಣೆಗಳನ್ನು ನಿರ್ವಹಿಸುವ ಪ್ರಮುಖ ವ್ಯಕ್ತಿಯಾಗಿದ್ದರೆ. ಇನ್ನೂ ಅವರು ಉನ್ನತ ಸ್ಥಾನಕ್ಕೆ ಹೋಗಲಿದ್ದಾರೆ. ಇದು ವಿಜಯಪುರದವರೆಲ್ಲರಿಗೂ ಹೆಮ್ಮೆಯ, ಅಭಿಮಾನದ ಸಂಗತಿ. ದೇವರಗೆಣ್ಣೂರು ಎಂಬ ಪುಟ್ಟ ಹಳ್ಳಿಯಿಂದ ಬಂದಿರುವ ಇವರು ಇಂದಿಗೂ ವಿಜಯಪುರಕ್ಕೆ ಬಂದರೆ, ಹಳ್ಳಿಯಲ್ಲಿಯೇ ಇರುತ್ತಾರೆ ಮತ್ತು ಹಳೆಯ ಗೆಳೆಯರೊಂದಿಗೆ ಸ್ಫೂರ್ತಿ ಫೌಂಡೇಶನ್ ಮುಖಾಂತರ ಸಾಮಾಜಿಕ ಕಾರ್ಯಗಳನ್ನು ಮಾಡುತ್ತಾರೆ. ಇದು ಇವರ ಮಣ್ಣಿನ ಗುಣ ತೋರಿಸುತ್ತದೆ ಎಂದರು.

ಸಿದ್ದೇಶ್ವರ ಸಹಕಾರಿ ಬ್ಯಾಂಕ್ ಅಧ್ಯಕ್ಷ ರವಿಂದ್ರ ಬಿಜ್ಜರಗಿ ಮಾತನಾಡಿ, ವಿಜಯಪುರದ ವರ್ತಕರ ಮತ್ತು ಎಪಿಎಂಸಿ ಗೆ ಸಂಬಂಧಿಸಿದ ಹಲವಾರು ವ್ಯಾಜ್ಯಗಳನ್ನು ಬಿದರಿ ಅವರ ಗಮನಕ್ಕೆ ತಂದಾಗ ಅವುಗಳಿಗೆ ನ್ಯಾಯಯುತ ಪರಿಹಾರ ದೊರಕಿಸಿದ್ದಾರೆ. ಬಿದರಿ ಮನೆತನ ವಿಜಯಪುರಕ್ಕೆ ಉತ್ತಮ ಕೊಡುಗೆ ನೀಡಿದೆ. ರಾಮಪ್ಪ ಬಿದರಿ ಅವರು ಸಂಸದರಾಗಿ, ಡಾ.ಸಿ.ಆರ್.ಬಿದರಿ, ಡಾ.ಎಲ್.ಎಚ್.ಬಿದರಿ ವೈದ್ಯರಾಗಿ, ಆಶಾ ಬಿದರಿ ಸಾಮಾಜಿಕವಾಗಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ ಎಂದರು.

ವಿಡಿಎ ಅಧ್ಯಕ್ಷ ಡಾ.ಗಂಗಾಧರ ಸಂಬಣ್ಣಿ, ಮಾಜಿ ಅಧ್ಯಕ್ಷ ಚಂದ್ರಕಾಂತ ಶೆಟ್ಟಿ, ಮಾಜಿ ಶಾಸಕ ಪೊ??.ರಾಜು ಆಲಗೂರ, ಅರುಣ ಹುಂಡೇಕಾರ, ಬಸವರಾಜ ಪಾಟೀಲ, ಡಾ.ವಿಜಯ ಪಾಟೀಲ, ವಿಜಯ ಡೋಣಿ, ಪ್ರಕಾಶ ಹಕ್ಕಪಕ್ಕಿ, ಜಯಾನಂದ ತಾಳಿಕೋಟಿ, ಪ್ರವೀಣ ವಾರದ, ವೀರಣ್ಣ ಹುಂಡೇಕಾರ, ಆನಂದ ಮಂಗಳವೇಡೆ, ದಾದು ತಿವಾರಿ, ಸುಭಾಸ ಬಗಲಿ ಸೇರಿದಂತೆ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

# ಅಪಾಯದ ಹಂತದಲ್ಲಿರುವ 129 ಸರಕಾರಿ ಶಾಲೆ ನೆಲಸಮಕ್ಕೆ ತೀರ್ಮಾನ



**ಬೆಳಗಾವಿ ವಾರ್ತೆ ಬಸವನ ಬಾಗೇವಾಡಿ:** ತಾಲೂಕಿನಲ್ಲಿ ಸರ್ಕಾರಿ ಶಾಲೆಗಳ ಕಟ್ಟಡಗಳ ಸರ್ವೆ ಮಾಡಿದ್ದು ಅದ ಪ್ರಕಾರ 129 ಸರಕಾರಿ ಶಾಲೆಗಳು ಡೆಮಾಲಿಸ್, 110 ಮೈನರ್ ರಿಪೇರಿ 105 ಶಾಲೆಗಳು ಮೇಜರ್ ರಿಪೇರಿಗಳಿವೆ ಎಂದು ಸಭೆಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ವಸಂತ ರಾಠೋಡ್ ತಿಳಿಸಿದರು

ಕೂಡಲೇ ಅಪಾಯದ ಹಂತದಲ್ಲಿರುವ ಶಾಲೆಗಳನ್ನು ಡೆಮಾಲಿಸ್ ಮಾಡಬೇಕೆಂದು ತಾಲೂಕು ಪಂಚಾಯಿತಿಗೆ ಈ ಓ ವೆಂಕಟೇಶ್ ವಂದಾಲ ತಿಳಿಸಿದರು ಪಟ್ಟಣದ ತಾಲೂಕು ಪಂಚಾಯಿತಿ ಸಭಾ ಬುಧವಾರ ನಡೆದ ತಾಲೂಕ ಮಟ್ಟದ ಅಧಿಕಾರಿಗಳ ಸಾಮಾನ್ಯ ಸಭೆಯಲ್ಲಿ ಸೂಚನೆ ನೀಡಿದರು ತಾಲೂಕಿನಲ್ಲಿ ಸಂಪೂರ್ಣ ಮಳೆಯಾಗುವವರೆಗೆ ಕುಡಿಯುವ ನೀರಿನ ತೊಂದರೆ ಆಗದಂತೆ ನೋಡಿಕೊಳ್ಳಬೇಕೆಂದು ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗೆ ಸೂಚಿಸಿದರು ಆರೋಗ್ಯ ಇಲಾಖೆಯ ಈಗಾಗಲೇ ಕೆಮ್ಮ ಜ್ವರ ಬಿಪಿ ಶುಗರ್ ತಪಾಸಣೆ ನಡೆದಿದೆ 12 ಜನರಿಗೆ ಹಾಗೂ ನಿಡುಗುಂದಿ ತಾಲೂಕಿನಲ್ಲಿ ಇಬ್ಬರಿಗೆ ಕ್ಷಯ ರೋಗ ಕಾಯಿಲೆ ಕಂಡು ಬಂದಿದೆ ಎಂದು ಹೇಳಿದರು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಮಾತನಾಡಿ ನಿಡಗುಂದಿ ತಾಲೂಕು ಒಂದು ಬಿಟ್ಟರೆ ಉಳಿದ ಎರಡು ತಾಲೂಕಿನಲ್ಲಿ ಉತ್ತಮ ಮಳೆಯಾಗಿದೆ ಕಾರಣ ರೈತರಿಗೆ ಈಗ ತೊಗರಿ ಮತ್ತು ಹತ್ತಿಯನ್ನು ಬಿತ್ತುತ್ತಿದ್ದಾರೆ ಮಳೆ ಅವಶ್ಯಕತೆ ಇದೆ ಬೆಳೆ ವಿಮೆ ಎಷ್ಟು ರೈತರಿಗೆ ಬಂದಿದೆ ಎಂದು ಈ ಓ ಕೇಳಿದಾಗ ಬಸವನ ಬಾಗೇವಾಡಿ ತಾಲೂಕಿನಲ್ಲಿ 13216 ಫಲಾನುಭವಿ ರೈತರಿಗೆ 220906272. 8 ರಷ್ಟು ಕೋಲಾರ್ ತಾಲೂಕಿಗೆ 2054 ಫಲಾನುಭವಿ ರೈತರಿಗೆ 44869750. 29 ರಷ್ಟು ನಿಡಗುಂದಿ ತಾಲೂಕಿಗೆ 730 ಫಲಾನುಭವಿ ರೈತರಿಗೆ4412725.8 ರಷ್ಟು ಇನ್ಸೂರೆನ್ಸ್ ಕ್ಲೇಮ್ ಆಗಿದೆ ಎಂದರು ಕೆ ಆರ್ ಡಿ ಎಲ್ ಇಲಕೆಯಿಂದ ನಿರ್ಮಾಣಗೊಳ್ಳುತ್ತಿರುವ ಶಾಲೆಯ ಹಾಗೂ ಅಂಗನವಾಡಿ ಕಾಮಗಾರಿಗಳು ಜೂನ್ ಒಳಗಾಗಿ ಮುಕ್ತಾಯಗೊಳಿಸಿಲ್ಲ ಏಕೆ ಎಂದು ಕೆ ಆರ್ ಐ ಡಿ ಎಲ್ ಅಧಿಕಾರಿಗಳಿಗೆ ಪ್ರಶ್ನಿಸಿದ್ದರು ಇಲಾಖೆಯ ಲಕ್ಷ್ಮಿ ಅವರು ಶೀಘ್ರದಲ್ಲಿ ಮುಕ್ತಾಯಗೊಳಿಸುವುದಾಗಿ ತಿಳಿಸಿದರು ಎಸ್ಸಿ ಎಸ್ಟಿ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಕಾಮಗಾರಿಯ ಲಿಸ್ಟ್ ತೆಗೆದುಕೊಂಡು ಕಾಮಗಾರಿ ಆಗಿದೆ ಇಲ್ಲವೋ ನೋಡಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮಂಜುಳಾ ಹಿರೇಮನಿ ಅವರಿಗೆ ಈ ಓ ಸೂಚಿಸಿದರು ಹೆಬ್ಬಾಳ ತೆಲಿಗಿ ನಿಡುಗುಂದಿ ಬಾಗೇವಾಡಿ 1.20 ಕೋಟಿ ಹಣ ಹಾಸ್ಟೆಲ್ ಅಭಿವೃದ್ಧಿಗೆ ಬಂದಿದೆ ಎಂದು ಸಭೆಯ ಗಮನಕ್ಕೆ ಸಮಾಜ ಕಲ್ಯಾಣ ಅಧಿಕಾರಿ ಮಕ್ಬುಲ್ಲ ದಪ್ಪೇದಾರ್ ತಿಳಿಸಿದರು ಹಾಸ್ಟೆಲಿನಲ್ಲಿರುವ ವಿದ್ಯಾರ್ಥಿನಿಯರನ್ನು ಅಧಿಕಾರಿಗಳನ್ನು ನಂಬಿಕೊಂಡು ಪಾಲಕರು ತಮ್ಮ ಮಕ್ಕಳನ್ನು ಹಾಸ್ಟೆಲ್ ನಲ್ಲಿ ಬಿಟ್ಟಿರುವವರು ಕಾರಣ ಅಧಿಕಾರಿಗಳು ಎರಡು ತಿಂಗಳು ಒಮ್ಮೆ ಆರೋಗ್ಯ ತಪಾಸನೆ ಮಾಡಿಸಬೇಕು ಜೊತೆಗೆ ಪಾಲಕರ ಹೊರತಾಗಿ ವಿದ್ಯಾರ್ಥಿನಿಯರನ್ನು ಬೇರೆಯವರು ಯಾರ ಜೊತೆ ಹೊರಗಡೆ ಕಳಿಸಬಾರದು ಎಂದು ಬಿಸಿಎಂ ಮತ್ತು ಸಮಾಜ ಕಲ್ಯಾಣ ಅಧಿಕಾರಿಗಳಿಗೆ ಕಟ್ಟುವ ನಿಟ್ಟಿನ ಎಚ್ಚರಿಕೆಯನ್ನು ತಾಲೂಕ ಪಂಚಾಯತಿ ಅಧಿಕಾರಿ ಸೂಚಿಸಿದರು ಕೋಲಾರ ತಾಲೂಕ ಪಂಚಾಯಿತಿ ಅಧಿಕಾರಿ ಸುನಿಲ್ ಮದ್ದಿನ್ ಸೇರಿದಂತೆ ಅಖಂಡ ತಾಲೂಕಿನ ಎಲ್ಲಾ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಪ್ರೊ.ಭಗವಾನ್ ವಿರುದ್ಧ ಕಠಿಣ ಕ್ರಮಕ್ಕೆ ಸ್ವರಾಜ್ಯ ಸೇನಾ ಆಗ್ರಹ



**ಬೆಳಗಾವಿ ವಾರ್ತೆ ವಿಜಯಪುರ:** ಮರ್ಯಾದಾ ಪುರು ಷೋತ್ತಮ ಶ್ರೀ ರಾಮಚಂದ್ರನ ಬಗ್ಗೆ ಅವಾಚ್ಯ ಶಬ್ದಗಳನ್ನು ಬಳಸಿದ ಪ್ರೊ.ಕೆ.ಎಸ್.ಭಗವಾನ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ವಿಜಯಪುರ ಸ್ವರಾಜ್ಯ ಸೇನಾ ವತಿಯಿಂದ ಮಂಗಳವಾರ ಜಿಲ್ಲಾಡಳಿತ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆ ಸಂಸ್ಥಾಪಕ ಅಧ್ಯಕ್ಷ ಕಿರಣ ಕಾಳೆ, ಇಡೀ ವಿಶ್ವಕ್ಕೆ ಆದರ್ಶವಾಗಿರುವ ಶ್ರೀ ರಾಮನ ಬಗ್ಗೆ ಮತ್ತು ಹಿಂದೂ ಸಂಸ್ಕೃತಿ ಬಗ್ಗೆ ಪೊ??. ಕೆ.ಎಸ್.ಭಗವಾನ್ ಅವಹೇಳನಕಾರಿ ಹೇಳಿಕೆ ನೀಡಿದ್ದು ಖಂಡನೀಯ. ಚುನಾವಣೆ ಸಮಯದಲ್ಲಿ ನನ್ನ ಹೆಸರಿನಲ್ಲೂ ರಾಮ ಇದ್ದಾನೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿದ್ದರೆ, ನಾನು ಹಿಂದು ಇದ್ದೇನೆ, ರಾಜಕೀಯಕ್ಕಾಗಿ ನನ್ನ ಧರ್ಮ ಬಿಡಲಾಗಲ್ಲ ಎಂದು ಹೇಳಿದ್ದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರವರೇ, ನಿಮ್ಮ ಹಿಂದು ಧರ್ಮದ ಬಗ್ಗೆ ಅವಹೇಳನ ನಡೆದರೂ ತಾವು ಏಕೆ ಕ್ರಮ ಕೈಗೊಳ್ಳುತ್ತಿಲ್ಲ? ಕೂಡಲೇ ಸರ್ಕಾರ ಇಂತಹ ಹಿಂದೂ ವಿರೋಧಿಗಳ ಮೇಲೆ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ, ರಾಜ್ಯದಾದ್ಯಂತ ಸಮಸ್ತ ಹಿಂದೂ ಬಾಂಧವರು ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಆನಂದ ಚೌಧರಿ, ಪವನ ನಲಗೆ, ಗಣೇಶ ಗರುಡಕರ, ಸ್ವರೂಪ ಸಪ್ತಾಳೆ, ಆಕಾಶ ಗೋತ್ರಾಳೆ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಜೂನ್ 20 ರಂದು ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ

ಧಾರವಾಡ: ಧಾರವಾಡದ ವಿಜಯಾರಸ್ತೆ ಹತ್ತಿರದ ಹೆಸ್ಕಾಂನ ಶಹರ ಉಪ ವಿಭಾಗ-2 ಕಛೇರಿಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ(ವಿ) ದೇವರಾಜ ಹೆಗಡೆ ಅವರ ಅಧ್ಯಕ್ಷತೆಯಲ್ಲಿ ಗ್ರಾಹಕರ ಕುಂದು ಕೊರತೆಗಳ ಸಭೆಯನ್ನು ಜೂನ್ 20, 2026 ರಂದು ಮಧ್ಯಾಹ್ನ 3 ಗಂಟೆ ಆಯೋಜಿಸಲಾಗಿದೆ.

ಆದ್ದರಿಂದ ಶಹರ ಉಪ ವಿಭಾಗ-2, ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಗ್ರಾಹಕರು ಸಭೆಗೆ ಹಾಜರಾಗಿ ತಮ್ಮ ವಿದ್ಯುತ್ ಬಗ್ಗೆ ಇದ್ದ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕು ಎಂದು ಹೆಸ್ಕಾಂನ ಕಾರ್ಯ ಮತ್ತು ಪಾಲನೆ ಉಪ ವಿಭಾಗ-2 ರ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರು(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧಿಕಾರಿಗಳು ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಿ; ಸಾರ್ವಜನಿಕರ ಸಮಸ್ಯೆ ಪರಿಹರಿಸಲು ಅಧಿಕಾರಿಗಳು ಮುಂದಾಗಲಿ: ಜಿಲ್ಲಾಧಿಕಾರಿ ಸ್ನೇಹಲ್ ಆರ್



**ಬೆಳಗಾವಿ ವಾರ್ತೆ ಧಾರವಾಡ:** ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಿವಿಧ ಇಲಾಖೆಗಳ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ಕಾರ್ಯ ನಿರ್ವಹಿಸಬೇಕಿದೆ. ಸಾರ್ವಜನಿಕರ ಸಮಸ್ಯೆಗಳನ್ನು ಶೀಘ್ರಗತಿಯಲ್ಲಿ ಪರಿಹರಿಸಲು ಅಧಿಕಾರಿಗಳು ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ಜರುಗಿಸಿ ಮಾತನಾಡಿದ ಅವರು, ಸರ್ಕಾರದ ಆಶಯಗಳನ್ನು ಪೂರೈಸುವ ನಿಟ್ಟಿನಲ್ಲಿ ಪಾರದರ್ಶಕವಾಗಿ ಅಧಿಕಾರಿಗಳು ಕೆಲಸ ಮಾಡಬೇಕು. ಧಾರವಾಡ ಜಿಲ್ಲೆಯ ಸಮಸ್ಯೆಗಳು ಮುಖ್ಯಮಂತ್ರಿಗಳ ಕಚೇರಿಗೆ ಹೋಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕಾಗುತ್ತದೆ. ವಿವಿಧ ಇಲಾಖೆಗಳ ಅಧಿಕಾರಿಗಳು ತಂಡವಾಗಿ ಕಾರ್ಯ ನಿರ್ವಹಿಸಬೇಕು. ಜನರ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಯಾವುದೇ ರೀತಿಯ ವಿಳಂಬವಾಗಬಾರದು. ಕಾಲಮಿತಿಯಲ್ಲಿಯೇ ಜನರ ಸಮಸ್ಯೆಗಳನ್ನು ಇತ್ಯರ್ಥಗೊಳಿಸಬೇಕು. ಸಾರ್ವಜನಿಕರ ಸ್ಥಳಗಳಲ್ಲಿ ಗೌರವವನ್ನು ಕಾಪಾಡಿಕೊಂಡು ಹೋಗಬೇಕಾಗುತ್ತದೆ. ವಿವಿಧ ಯೋಜನೆಗಳಿಗೆ ದೊರೆತ ಅನುದಾನವನ್ನು ಹೇಗೆ ಬಳಸಲಾಗಿದೆ ಎಂಬುದನ್ನು ಪರಿಶೀಲಿಸಲಾಗುವುದು. ನೈಸರ್ಗಿಕ ವಿಕೋಪಗಳು ಸಂಭವಿಸುವ ಮುನ್ನ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಸರ್ಕಾರದ ವಿವಿಧ ಯೋಜನೆಗಳಡಿ ಸಾರ್ವಜನಿಕರಿಗೆ ವಿತರಿಸಿದ ವಾಹನಗಳು ಯಾವ ಉದ್ದೇಶಕ್ಕೆ ಬಳಸಲಾಗುತ್ತಿದೆ ಎಂಬುದನ್ನು ಪರಿಶೀಲಿಸಬೇಕು. ಬೇರೆ ಉದ್ದೇಶಗಳಿಗೆ ಬಳಕೆ ಆಗದಂತೆ ಕ್ರಮ ವಹಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಯುವಕರಿಗೆ ಕೌಶಲ್ಯ ತರಬೇತಿ ನೀಡಬೇಕು. ಕೈಗಾರಿಕಾ ಪಾರ್ಕ್ ನಿರ್ಮಾಣ ಮಾಡಲು ಜಾಗವನ್ನು ಗುರುತಿಸಬೇಕಿದೆ. ಸರ್ಕಾರಿ ಜಮೀನು, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಆಸ್ತಿ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಜಾಗಗಳನ್ನು ಗುರುತಿಸಿ, ಫಲಕಗಳನ್ನು ಅಳವಡಿಸಬೇಕು. ಆ ಮೂಲಕ ಸರ್ಕಾರದ ಆಸ್ತಿ ಖಾಸಗಿ ವ್ಯಕ್ತಿಗಳ ಪಾಲಾಗುವುದನ್ನು ತಪ್ಪಿಸಬೇಕು. ಸ್ಥಳೀಯರಿಗೆ ಉತ್ತಮ ಶಿಕ್ಷಣ ಹಾಗೂ ಉದ್ಯೋಗಾವಕಾಶಗಳನ್ನು ಸೃಷ್ಟಿಸಬೇಕು. ಆ ಮೂಲಕ ವಲಸೆ ಪ್ರಮಾಣವನ್ನು ಕಡಿಮೆ ಮಾಡಲು ಪ್ರಯತ್ನಿಸಬೇಕಿದೆ. ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಬೇಕು. ಕಾನೂನು ಬದ್ಧವಾಗಿ ಹಾಗೂ ಸರ್ಕಾರದ ಮಾರ್ಗಸೂಚಿ, ನಿಯಮಗಳಡಿಯಲ್ಲಿ ಅಧಿಕಾರಿಗಳು ಕೆಲಸ ಮಾಡಬೇಕು. ಅಧಿಕಾರಿಗಳು ವಿನಯತೆ, ತಾಳ್ಮೆಯಿಂದ ಕಾರ್ಯನಿರ್ವಹಿಸಬೇಕಿದೆ ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಯಾವುದೇ ಶಾಲೆಗಳನ್ನು ಮುಚ್ಚುವುದಿಲ್ಲ. ಶಾಲಾ ಕಟ್ಟಡಗಳು ಸುಸ್ಥಿತಿಯಲ್ಲಿರುವ ಬಗ್ಗೆ ಜೂನ್ 25 ರೊಳಗೆ ಮಾಹಿತಿಯನ್ನು ಒದಗಿಸಬೇಕು. ಸಮವಸ್ತ್ರ ಹಾಗೂ ಶೂ ವಿತರಣೆಯನ್ನು ವಿದ್ಯಾರ್ಥಿಗಳಿಗೆ ವಿತರಿಸಬೇಕು. ಶಾಲೆ ಬಿಟ್ಟ ಮಕ್ಕಳನ್ನು ಪುನಃ ಶಾಲೆಗೆ ದಾಖಲಾತಿ ಮಾಡಿಸಬೇಕು. ಸರ್ಕಾರಿ ಕಟ್ಟಡಗಳು ಬೀಳುವ ಹಂತದಲ್ಲಿದ್ದರೆ ಅವುಗಳ ಮಾಹಿತಿಯನ್ನು ಒದಗಿಸಬೇಕು. ಭ್ರಷ್ಟಾಚಾರದ ಕುರಿತು ಫಲಕಗಳನ್ನು ಅಳವಡಿಸಬೇಕು. ಪ್ರತಿ 2-3 ಗ್ರಾಮ ಪಂಚಾಯತಿಗಳಿಗೆ ಸಿಎಸ್ಆರ್ ಶಾಲೆಗಳನ್ನು ಕೆಪಿಎಸ್ ಮಾದರಿಯಲ್ಲಿ ಉನ್ನತೀಕರಣ ಮಾಡಲಾಗುವುದು. ಗುಣಮಟ್ಟದ ಶಿಕ್ಷಣಕ್ಕೆ ಆಧ್ಯತೆ ನೀಡಬೇಕು. ಸಿಎಸ್ಆರ್ ಅನುದಾನ ಬಳಕೆಯ ಬಗ್ಗೆ ಮಾಹಿತಿ ಒದಗಿಸಬೇಕು. ಗೃಹಜ್ಯೋತಿ ಹಾಗೂ ಗೃಹಲಕ್ಷ್ಮೀ, ಶಕ್ತಿ ಯೋಜನೆಗಳಿಗೆ ಸ್ಮಾರ್ಟ ಕಾರ್ಡ್ ವಿತರಿಸಲಾಗುವುದು. ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳು ತಲುಪಬೇಕು. ಉಚಿತ ಬಸ್ ಪಾಸ್ ವಿತರಣೆಗೆ ಕ್ರಮವಹಿಸಲಾಗುವುದು. ಮರಣ ಹೊಂದಿದವರ ಬಗ್ಗೆ ಮಾಹಿತಿ ಸಂಗ್ರಹಿಸಬೇಕು. ನಗರ ಪ್ರದೇಶಗಳಲ್ಲಿ ರಿಂಗ್ ರೋಡ್ ಹೊಂದಿರಬೇಕಾಗಿರುತ್ತದೆ. ರಿಂಗ್ ರೋಡ್ ನಿರ್ಮಾಣ ಮಾಡುವ ಪ್ರದೇಶದಲ್ಲಿ ಯಾವುದೇ ರೀತಿಯ ಕಾಮಗಾರಿಗಳು ನಡೆಯಬಾರದು. ಮುಖ್ಯಮಂತ್ರಿಗಳು ಜಿಲ್ಲೆಗೆ ಭೇಟಿ ನೀಡಿದಾಗ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದರು.

ಕರ್ತವ್ಯ ಆ್ಯಪ್ ಮೂಲಕ ಸರ್ಕಾರಿ ನೌಕರರ ಹಾಜರಾತಿ ಕಡ್ಡಾಯ: ಜಿಲ್ಲೆಯ ಸರ್ಕಾರಿ ನೌಕರರು ಕರ್ತವ್ಯ ಆ್ಯಪ್ ಮೂಲಕ ಹಾಜರಾತಿಯನ್ನು ಕಡ್ಡಾಯವಾಗಿ ದಾಖಲಿಸಬೇಕು. ಬೆಳಿಗ್ಗೆ 10 ಗಂಟೆ ಹಾಗೂ ಸಂಜೆ 5 ಗಂಟೆಯ ನಂತರ ಹಾಜರಾತಿಯನ್ನು ನಮೂದಿಸಬೇಕು. ಅಧಿಕಾರಿಗಳು 24ಘಿ7 ಕೇಂದ್ರಸ್ಥಾನದಲ್ಲಿದ್ದು, ಕಾರ್ಯನಿರ್ವಹಿಸಬೇಕು. ಯಾವುದೇ ರೀತಿಯಲ್ಲಿ ಸಾರ್ವಜನಿಕರನ್ನು ತಾವು ವಾಸಿಸುವ ಮನೆಗಳಿಗೆ ಕರೆಸಿಕೊಂಡು ಸಮಸ್ಯೆಗಳನ್ನು ಪರಿಹರಿಸಲು ಮುಂದಾಗಬಾರದು. ಜಿಲ್ಲಾ ಮಟ್ಟ ಹಾಗೂ ತಾಲೂಕಾ ಮಟ್ಟದ ಅಧಿಕಾರಿಗಳು ತಮ್ಮ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕರ್ತವ್ಯ ಆ್ಯಪ್ ಮೂಲಕ ಹಾಜರಾತಿ ನಮೂದಿಸುವಂತೆ ಸೂಚಿಸಬೇಕು.

ಸೈಬರ್ ಕ್ರೈಮ್, ಡ್ರಗ್ಸ ನಿಯಂತ್ರಿಸಿ: ಪೊಲೀಸರು ಹಾಗೂ ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿ ಯಾವುದೇ ರೀತಿಯಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಅನಾವಶ್ಯಕ ಮಾಹಿತಿ ನೀಡಬಾರದು. ಅಲ್ಲದೇ ರೀಲ್ಸ ಕೂಡ ಮಾಡಬಾರದು. ಸೈಬರ್ ಕ್ರೈಮ್ ತಡೆಗೆ ಪೊಲೀಸ್ ಇಲಾಖೆ ಮುಂದಾಗಬೇಕು. ಪೊಲೀಸರು ತಮ್ಮ ಅಧಿಕಾರವನ್ನು ಚಲಾಯಿಸಬೇಕು. ಜಿಲ್ಲೆಯಲ್ಲಿ ಕೋಮು ಗಲಭೆ ಉಂಟು ಮಾಡುವ ಗುಂಪುಗಳನ್ನು ಹತ್ತಿಕ್ಕಲು ಪೊಲೀಸರು ಮುಂದಾಗಬೇಕು. ಆನ್‌ಲೈನ್ ಜೂಜಾಟ, ಡ್ರಗ್ಸ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕಿದೆ. ತಾಲ್ಲೂಕುವಾರು ರೌಡಿ ಸ್ಕ್ವಾಡ್ ಮಾಡಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ತಿಳಿಸಿದರು.

ಹೋಬಳಿ, ತಾಲ್ಲೂಕು, ಜಿಲ್ಲಾ ಮಟ್ಟದ ಜನ ಸಂಪರ್ಕ ಸಭೆ: ಜಿಲ್ಲೆಯ ಪ್ರತಿ ಹೋಬಳಿ, ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಜನ ಸಂಪರ್ಕ ಸಭೆಯನ್ನು ಆಯೋಜಿಸಲಾಗುವುದು. ಹೋಬಳಿ ಮಟ್ಟದ ಜನ ಸಂಪರ್ಕ ಸಭೆಗೆ ಆ ಕ್ಷೇತ್ರದ ಶಾಸಕರು ಭಾಗವಹಿಸುವರು. ಪ್ರತಿ ವಾರ ತಾಲ್ಲೂಕು ಮಟ್ಟದ ಸಭೆಗಳು ನಡೆಯಲಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಆಯಾ ಕ್ಷೇತ್ರದ ಶಾಸಕರು ಪಾಲ್ಗೊಳ್ಳುವರು. ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಜನ ಸಂಪರ್ಕ ಸಭೆ ನಡೆಯಲಿದೆ. ಜನ ಸಂಪರ್ಕ ಸಭೆಗಳಿಗೆ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗಿ, ಪೂರ್ವ ತಯಾರಿಗಳನ್ನು ಮಾಡಿಕೊಳ್ಳಬೇಕು. ತಹಶೀಲ್ದಾರರು ಪ್ರತಿ ಹಳ್ಳಿಗಳಿಗೂ ಭೇಟಿ ನೀಡಿ, ಜನರ ಕುಂದುಕೊರತೆಗಳನ್ನು ಬಗೆಹರಿಸಬೇಕಾಗುತ್ತದೆ. ಜನರ ಸಮಸ್ಯೆಗಳಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬುದನ್ನು ಐಪಿಜಿಆರ್‌ಎಸ್ ಹಾಗೂ ಸಕಾಲದಲ್ಲಿ ಸಮರ್ಪಕವಾಗಿ ಮಾಹಿತಿ ಒದಗಿಸಬೇಕು. ಒಂದು ವೇಳೆ ವಿನಾಕಾರಣ ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸಲು ವಿಳಂಬ ಮಾಡುತ್ತಿದ್ದರೆ, ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಅಲ್ಲದೇ ಅಧಿಕಾರಿಗಳನ್ನು ಅಮಾನತುಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಸೂಚಿಸಿದರು.

100 ದಿನಗಳ ಅಭಿಯಾನ: ಮುಖ್ಯಮಂತ್ರಿಗಳು ಯುವ, ಆಸ್ತಿ, ಉದ್ಯೋಗ, ವಿದ್ಯುಚ್ಛಕ್ತಿ ಹಾಗೂ ವಸತಿ ವ್ಯವಸ್ಥೆ ಕಲ್ಪಿಸುವ 100 ದಿನಗಳ ಅಭಿಯಾನವನ್ನು ಕೈಗೊಂಡಿದ್ದಾರೆ. ಭಾರತ್ ಜೋಡೊ ಯುವ ಕ್ಲಬ್ ಸ್ಥಾಪಿಸಲಾಗುವುದು. ನಾಯಕತ್ವ, ಉದ್ಯೋಗ, ಕ್ರೀಡೆ ಮತ್ತು ಸಮುದಾಯ ಸೇವೆ ಮಾಡಲು ಯುವ ಕ್ಲಬ್ ಮುಂದಾಗಲಿವೆ. ವಾರ್ಷಿಕ ರೂ.10 ಲಕ್ಷ ಬೆಂಬಲ ಹಣದಲ್ಲಿ ಸುಮಾರು 10 ಸಾವಿರ ಯುವ ಕ್ಲಬ್‌ಗಳನ್ನು ಕಾರ್ಯನಿರ್ವಹಿಸಲಿವೆ. ಶಾಲೆ, ಸಮುದಾಯ ಭವನ, ನಿರ್ಮಿತಿ ಕೇಂದ್ರಗಳಲ್ಲಿ ಯುವ ಕ್ಲಬ್‌ಗಳು ಕಾರ್ಯನಿರ್ವಹಿಸಲಿದ್ದು, ಗ್ರಾಮೀಣ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸುತ್ತವೆ. ಯುವ ಕ್ಲಬ್‌ಗಳು ಯಾವುದೇ ರಾಜಕೀಯ ಕ್ಲಬ್‌ಗಳಾಗಿರುವುದಿಲ್ಲ.

ಯುವ ಉದ್ಯೋಗ ಸೇತು ಮಿಷನ್: ಈ ಮಿಷನ್ ಯುವಕರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸಲಿದೆ. ಸ್ಥಳೀಯ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸಬೇಕು. ಉದ್ಯೋಗ ಪಡೆದವರ ಮಾಹಿತಿಯನ್ನು ಸಂಗ್ರಹಿಸಲಾಗುವುದು.

ಭೂ ಗ್ಯಾರಂಟಿ ಯೋಜನೆ: ಸರ್ಕಾರದ 6 ನೇ ಗ್ಯಾರಂಟಿ ಯೋಜನೆಯಾದ ಭೂ ಗ್ಯಾರಂಟಿ ಯೋಜನೆಯ ಮೂಲಕ ಒಂದು ವರ್ಷದಲ್ಲಿ 1 ಕೋಟಿ ಕುಟುಂಬಗಳಿಗೆ ಬಿ ಖಾತೆಯಿಂದ ಎ ಖಾತೆಗೆ ಪರಿವರ್ತಿಸಲಾಗುವುದು. ಆಂದೋಲನದ ರೀತಿಯಲ್ಲಿ ಕಾರ್ಯಕ್ರಮ ನಡೆಯಲಿದೆ.

ಒಂದು ಬಾರಿ ವಿದ್ಯುತ್ ಸಂಪರ್ಕ ಪರಿಹಾರ: ಪ್ರತಿ ಮನೆಗಳನ್ನು ವಿದ್ಯುತ್ ಜಾಲಕ್ಕೆ ತರುವುದು ಈ ಯೋಜನೆಯ ಉದ್ದೇಶವಾಗಿದೆ. ಮೇ 31 ರೊಳಗಾಗಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ಮನೆ ನಿವೇಶನ ವಿತರಣಾ ಅಭಿಯಾನ: ನಿವೇಶನ ರಹಿತರಿಗೆ ನಿವೇಶನ ವಿತರಿಸಲಾಗುತ್ತದೆ. ಪ್ರತಿ ವಿಧಾನಸಭಾ ಕ್ಷೇತ್ರವಾರು 10 ಸಾವಿರ ಮನೆಗಳನ್ನು ವಿತರಿಸಲಾಗುವುದು. ಜಿಲ್ಲಾಧಿಕಾರಿಗಳಿಂದ ಭೂ ಬ್ಯಾಂಕ್ ರಚನೆ ಮಾಡಲಾಗುವುದು.

ಎಐ ಆಧಾರಿತ ಏಕೀಕೃತ ಹಾಗೂ ಸಮಗ್ರ ದೂರು ಪರಿಹಾರ ವ್ಯವಸ್ಥೆ: ಪ್ರತಿ ದೂರಿಗೆ ಸ್ಪಂದನೆ ಒದಗಿಸಬೇಕು. ಅಲ್ಲದೆ ಪ್ರತಿಯೊಬ್ಬ ನಾಗರೀಕನಿಗೂ ಸೇವೆ ನೀಡಬೇಕಾಗುತ್ತದೆ. ದೂರುಗಳನ್ನು ನಿರಂತರವಾಗಿ ಪರಿಶೀಲಿಸಲಾಗುವುದು. ಪ್ರತಿ ಹಂತದಲ್ಲೂ ಸ್ಪಷ್ಟ ಜವಾಬ್ದಾರಿಯನ್ನು ಹೊಂದಿರಬೇಕು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ಅಧಿಕಾರಿಗಳು ಚುರುಕಾಗಿ ಕಾರ್ಯನಿರ್ವಹಿಸಬೇಕು. ಸರ್ಕಾರದ ನಿಯಮಗಳಡಿಯಲ್ಲಿ ಕೆಲಸಮಾಡಬೇಕು. ಜಿಲ್ಲೆಯಲ್ಲಿ ಗುಣಮಟ್ಟದ ಕಾಮಗಾರಿಗಳು ನಡೆಯಲು ಆಧ್ಯತೆ ನೀಡಬೇಕು. ಪ್ರತಿ ಶಾಲೆ, ಕಾಲೇಜುಗಳಿಗೆ ಖುದ್ದಾಗಿ ಭೇಟಿ ನೀಡಲಾಗುವುದು. ಶಾಲಾ ಕಟ್ಟಡಗಳು ಹಾಗೂ ಸರ್ಕಾರಿ ಕಟ್ಟಡಗಳನ್ನು ಪರಿಶೀಲನೆ ಮಾಡಲಾಗುವುದು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ಮಾತನಾಡಿ, ಜನರು ದುಡ್ಡಿನ ಆಸೆಗಾಗಿ ಹೂಡಿಕೆ ಮಾಡುವ ಕಂಪನಿಗಳಲ್ಲಿ ಹಣ ವಿನಿಯೋಗಿಸಬಾರದು. ಹಳ್ಳಿಗಳಲ್ಲಿ ಮೋಸ ಮಾಡುವ ಜಾಲಗಳು ಹೆಚ್ಚಾಗಿದ್ದು ಈ ಕುರಿತು ರೈತರಿಗೆ ಜಾಗೃತಿ ಮೂಡಿಸಬೇಕು. ಒಂದು ವೇಳೆ ಅಂತಹ ಜಾಲಗಳು ಪತ್ತೆಯಾದಲ್ಲಿ, ಹತ್ತಿರದ ಪೊಲೀಸ್ ಠಾಣೆಗೆ ದೂರು ನೀಡಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಪ್ರೊಬೇಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ಶೇಖ್ ಅಬ್ದುಲ್ ಅಲಿಮ್ ಸಿದ್ದಿಕಿ, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಇದ್ದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಕೆ.ಸಿ.ಭದ್ರಣ್ಣವರ ಸೇರಿದಂತೆ ಎಲ್ಲ ತಾಲೂಕುಗಳ ತಹಶೀಲ್ದಾರರು, ಎಲ್ಲ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಸರಕಾರಿ ನೌಕರರ ಮೇಲೆ ಹಲ್ಲೆ ನಡೆಸಿದ ವ್ಯಕ್ತಿಗಳ ವಿರುದ್ಧ ಕಠಿಣ ಕ್ರಮ ಜರುಗಿಸುವಂತೆ ಸರಕಾರಿ ನೌಕರರ ಸಂಘದ ಪದಾಧಿಕಾರಿಗಳ ಆಗ್ರಹ



**ಬೆಳಗಾವಿ ವಾರ್ತೆ ಗದಗ:** ಚಿಕ್ಕಹಂದಿಗೋಳ ಗ್ರಾಮ ಪಂಚಾಯತ ಪಿಡಿಒ ಶಶಿಧರ ಕಪ್ಪರದ ಹಾಗೂ ವಾಟರ್‌ಮನ್ ಅರ್ಜುನ್ ಓಲೇಕಾರ ಅವರ ಮೇಲೆ ಹಲ್ಲೆ ಮಾಡಿದ ವ್ಯಕ್ತಿಗಳನ್ನು ತಕ್ಷಣವೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ರಾಜ್ಯ ಸರಕಾರಿ ನೌಕರರ ಸಂಘದ ಪದಾಧಿಕಾರಿಗಳು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ ಅವರಿಗೆ ಮನವಿ ಸಲ್ಲಿಸಿದರು.

ಚಿಕ್ಕಹಂದಿಗೋಳ ಗ್ರಾಮ ಪಂಚಾಯತ ಪಿಡಿಒ ಶಶಿಧರ ಕಪ್ಪರದ ಹಾಗೂ ವಾಟರ್‌ಮನ್ ಅರ್ಜುನ್ ಓಲೇಕಾರ ಅವರು ಜೂ. 16ರಂದು ತಮ್ಮ ಸರ್ಕಾರಿ ಕರ್ತವ್ಯ ನಿರ್ವಹಿಸುತ್ತಿರುವ ಸಂದರ್ಭದಲ್ಲಿ ದುಂದೂರ ಗ್ರಾಮದ ಗಂಗಯ್ಯ ಗಣಾಚಾರಿ ಹಾಗೂ ಇತರರು ಮಾರಣಾಂತಿಕ ಹಲ್ಲೆ ನಡೆಸಿರುವುದು ಅತ್ಯಂತ ಖಂಡನೀಯ ಹಾಗೂ ದುಃಖಕರ ಸಂಗತಿಯಾಗಿದೆ ಎಂದು ಅಳಲು ತೋಡಿಕೊಂಡರು.

ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿ ಸಾರ್ವಜನಿಕ ಹಿತದೃಷ್ಟಿಯಿಂದ ತಮ್ಮ ಕರ್ತವ್ಯಗಳನ್ನು ನಿರ್ವಹಿಸುತ್ತಿರುವಾಗ ಅವರ ಮೇಲೆ ಹಲ್ಲೆ ನಡೆಸುವುದು ಕಾನೂನುಬಾಹಿರ ಕೃತ್ಯವಾಗಿದ್ದು, ಇದು ಸರ್ಕಾರಿ ಸೇವೆಯ ಕಾರ್ಯನಿರ್ವಹಣೆಗೆ ಅಡ್ಡಿಪಡಿಸುವ ಗಂಭೀರ ಅಪರಾಧವಾಗಿದೆ. ದಿನನಿತ್ಯ ಸಾರ್ವಜನಿಕರೊಂದಿಗೆ ಅತಿ ಹೆಚ್ಚು ಸಂಪರ್ಕವಿರುವಂತಹ ಇಲಾಖೆಯಾದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಇಲಾಖೆಯಲ್ಲಿ ಇಂತಹ ಘಟನೆಗಳಿಂದ ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಭಯದ ವಾತಾವರಣ ಉಂಟಾಗಿದ್ದು, ಸಾರ್ವಜನಿಕ ಸೇವೆಗಳ ಮೇಲೂ ಪ್ರತಿಕೂಲ ಪರಿಣಾಮ ಬಿರುತ್ತಿದೆ. ಆದ್ದರಿಂದ, ಈ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಹಲ್ಲೆ ನಡೆಸಿದ ತಪ್ಪಿತಸ್ಥ ವ್ಯಕ್ತಿಗಳ ಮೇಲೆ ಎಫ್‌ಐಆರ್ ದಾಖಲಿಸಿ ತಕ್ಷಣ ಬಂಧಿಸಿ ಕಾನೂನು ಪ್ರಕಾರ ಕಠಿಣ ಕ್ರಮ ಜರುಗಿಸಬೇಕು. ಜೊತೆಗೆ ಸರಕಾರಿ ನೌಕರರು ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿ ಮೇಲೆ ಸೂಕ್ತ ರಕ್ಷಣೆ ಒದಗಿಸಿ ಇಂತಹ ಘಟನೆಗಳು ಮರುಕಳಿಸದಂತೆ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಮಾಜಿ ಅಧ್ಯಕ್ಷ ಡಾ. ರವಿ ಎಲ್. ಗುಂಜೀಕರ, ಡಿ.ಎಸ್. ತಳವಾರ, ಎಂ.ಎಂ. ನಿಟ್ಟಾಲಿ, ಎಂ.ವೈ. ಮಲಕಶೆಟ್ಟಿ, ರಾಜು ಕಂಟಿಗೊಣ್ಣವರ, ಸಿದ್ದಪ್ಪ ಲಿಂಗದಾಳ, ಎಸ್.ಎಸ್. ಪಾರ್ವತಿಮಠ, ಶಿವಪ್ಪ ಹದ್ಲಿ ಸೇರಿ ಮತ್ತಿತರರು ಇದ್ದರು.

# ಮಹಾರಾಣಾ ಪ್ರತಾಪಸಿಂಹ ಜಯಂತಿ ಆಚರಣೆ

**ಬೆಳಗಾವಿ ವಾರ್ತೆ ವಿಜಯಪುರ:** ಶ್ರೀ ಮಹಾರಾಣ ಪ್ರತಾಪ್ ಸಿಂಹಜಿ ಅವರ 486 ನೇ ಜಯಂತೋತ್ಸವವನ್ನು ವಿಜಯಪುರದ ನಗರ ಅಭಿವೃದ್ಧಿ ಪ್ರಾಧಿಕಾರದ ಹತ್ತಿರವಿರು ವ ಮಹಾರಾಣಾ ಪ್ರತಾಪ್ ಸಿಂಹ ಸರ್ಕಲ್ ದಲ್ಲಿ ಬುಧವಾರ ಆಚರಿಸಲಾಯಿತು.

ಮಹಾರಾಣಾ ಪ್ರತಾಪ್ ಸಿಂಹಜಿ ಅವರ 486ನೇ ಜಯಂತೋತ್ಸವದ ಧ್ವಜಾರೋಹಣವನ್ನು ರಜಪೂತ್ ಸಮಾಜದ ಅಧ್ಯಕ್ಷ ಪರಶುರಾಮ್ ಸಿಂಗ್ ರಜಪೂತ್ ರಜಪೂತ ಅವರು ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಸಂತೋಷ ಹಲವಾಯಿ ಮಾತನಾಡಿ, ಉತ್ತರ ಭಾರತದಲ್ಲಿ ಕ್ರಿಸ್ತಶಕ 1516 ರಲ್ಲಿ ಜನಿಸಿದ ವೀರ ಮಹಾರಾಣಾ ಪ್ರತಾಪ್ ಸಿಂಹಂಜೆ ಹಾಗೂ ದಕ್ಷಿಣ ಭಾರತದಲ್ಲಿ ಶ್ರೀ ಛತ್ರಪತಿ ಶಿವಾಜಿ ಮಹಾರಾಜರು ಜನಿಸಿದರಿಂದ ಹಿಂದುತ್ವವು ಉಳಿಯಲು ಸಾಧ್ಯವಾಯಿತು ಮತ್ತು ಹಳದಿ ಘಾಟ್ ಯುದ್ಧದಲ್ಲಿ ಸೈನ್ಯವನ್ನು ಹಲವು ಬಾರಿ ಸೋಲಿಸಲಾಯಿತು ಮತ್ತು ಕ್ಷತ್ರಿಯ ಧರ್ಮ ಹಿಂದುತ್ವವಾಗಿದ್ದರಿಂದ ಭಾರತ ದೇಶವನ್ನು ಹಿಂದೂ ದೇಶ ಎಂದು ಕರೆಯಲು ಮೂಲಕಾರಣೆಭೂತರು ರಜಪೂತರು ಹಾಗೂ ಮರಾಠ ಕ್ಷತ್ರಿಯ ಸಮಾಜದ ಪಾತ್ರ ಬಹುಮುಖ್ಯವಾದದ್ದುಎಂದರು.

ನಮ್ಮ ಭಾರತ ಪ್ರಜಾಸತ್ತಾತ್ಮಕ ರಾಷ್ಟ್ರವಾಗಿರುವುದರಿಂದ ನಾವೆಲ್ಲರೂ ಸರ್ವ ಜನಾಂಗದ ಶಾಂತಿಯ ತೋಟದಲ್ಲಿ ಇರುವವರು. ಅಭಿವೃದ್ಧಿಯೇ ನಮ್ಮ ಮಂತ್ರ. ಅದಕ್ಕಾಗಿ ನಮ್ಮ ಸಮಾಜದ ಎಲ್ಲಾ ಹೆಣ್ಣು ಗಂಡು ಮಕ್ಕಳು ವಿದ್ಯಾವಂತರಾಗಿ ಬಲಿಷ್ಠ ಸಮಾಜವನ್ನಾಗಿ ಮಾಡಬೇಕಾಗಿ ಕರೆ ಕೊಟ್ಟರು.

ಈ ಸಂದರ್ಭದಲ್ಲಿ ಆರ್.ಎನ್. ಹಜೇರಿ, ಸಂತೋಷ ಹಲವಾಯಿ, ಪ್ರಕಾಶ ರಜಪೂತ, ಮೋಹನ್ ಸಿಂಗ್ ರಜಪೂತ, ಅರುಣ ಠಾಕೂರ್, ಪ್ರಕಾಶ ಠಾಕೂರ್, ಸಿದ್ದು ಸಿಂಗ್, ಶರತ್, ಪ್ರಕಾಶ ತೇಲಿ, ವಿಠ್ಠಲ್ ಸಿಂಗ್ ರಜಪೂತ ಸಿದ್ದಾಪುರ ಹಾಗೂ ದೊಂಡು ಸಿಂಗ್ ಹಜೇರಿ, ಅಮರ ಸಿಂಗ್ ಬನಿಷಿ, ಪ್ರತಾಪ್ ಹಜೇರಿ ಇನ್ನು ಅನೇಕ ಸಮಾಜದ ಮುಖಂಡರು ಪಾಲ್ಗೊಂಡಿದ್ದರು.



# ಕೂಲಿಕಾರರು ಕೆಲಸದ ಜೊತೆಗೆ ಆರೋಗ್ಯದ ಕಡೆ ಗಮನಹರಿಸಬೇಕು : ಬಸವರಾಜ ಸಂಕಗೊಂಡ



**ಬೆಳಗಾವಿ ವಾರ್ತೆ ವಿಜಯಪುರ:** ಜಿಲ್ಲೆಯ ತಿಕೋಟಾ ತಾಲೂಕಿನ ತಾಜಪುರ ಹೆಚ್ ಗ್ರಾಮ ಪಂಚಾಯತಿಯಲ್ಲಿ ಮನರೇಗಾ ಕಾಮಗಾರಿ ಸ್ಥಳದಲ್ಲಿ ಮಾಹಿತಿ ಶಿಕ್ಷಣ ಮತ್ತು ಸಂವಹನ ಕಾರ್ಯಕ್ರಮದಡಿ ಗ್ರಾಮ ಪಂಚಾಯತಿ ವತಿಯಿಂದ ಉಚಿತ ಆರೋಗ್ಯ ಶಿಬಿರವನ್ನು ಏರ್ಪಡಿಸಲಾಯಿತು.

ಎಡಿ ಬಸವರಾಜ ಸಂಕಗೊಂಡ ಕಾರ್ಯಕ್ರಮವನ್ನು

ಉದ್ಘಾಟಿಸಿ ಅವರು ಮಾತನಾಡಿ,"ಗ್ರಾಮದಲ್ಲಿ ಮನರೇಗಾ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ಕೂಲಿಕಾರರು ತಮ್ಮ ಕೆಲಸದ ಜೊತೆಗೆ ಆರೋಗ್ಯದ ಕಡೆ ಗಮನಹರಿಸುವುದು ಅತೀ ಮುಖ್ಯವಾಗಿದೆ. ಒಬ್ಬ ವ್ಯಕ್ತಿಗೆ ಆರೋಗ್ಯಕ್ಕಿಂತ ದೊಡ್ಡದಾದ ಭಾಗ್ಯ ಯಾವುದೂ ಇಲ್ಲ. ಇದನ್ನು ಅರಿತು ಗ್ರಾಮ ಪಂಚಾಯತಿ ಪಿಡಿಓ ಉಮೇಶ ಕನಮಡಿ ಅವರ ಮುಂದಾಳತ್ವದಲ್ಲಿ ಆರೋಗ್ಯ ಶಿಬಿರ ಆಯೋಜಿಸಿರುವುದು ನಿಜಕ್ಕೂ ಶ್ಲಾಘನೀಯ. ಕೂಲಿಕಾರರು ವೈದ್ಯರು ನೀಡುವ ಮಾತ್ರೆಗಳನ್ನು ಸರಿಯಾಗಿ ಪಡೆದುಕೊಳ್ಳಿ ಮತ್ತು ಅವರು ನೀಡುವ ಸಲಹೆಗಳನ್ನು ತಪ್ಪದೇ ಪಾಲಿಸಿ ಎಂದರು.

ನರೇಗಾದಡಿ ಕೆಲಸ ಮಾಡುವ ಕೂಲಿಕಾರರು ದಿನವಿಡೀ ಬಿಸಿಲು, ಧೂಳು, ಮಳೆ ಎನ್ನದೇ ದುಡಿಯುತ್ತಾರೆ. ಇದನ್ನು ಗಮನಿಸಿ ಗ್ರಾಮ ಪಂಚಾಯತಿಯವರು "ನರೇಗಾ ಕೂಲಿಕಾರರ ಆರೋಗ್ಯ ಶಿಬಿರ" ಆಯೋಜಿಸಿದೆ. ಇಂತಹ ಆರೋಗ್ಯ ಶಿಬಿರದಿಂದ ಜನರಲ್ಲಿ ಚೈತನ್ಯ ಹೆಚ್ಚಳವಾಗಿ ಕೆಲಸವು ಬಹಳ ಅಚ್ಚುಕಟ್ಟಾಗಿ ಆಗುತ್ತದೆ. ಕೂಲಿಕಾರರ ಸಾಮರ್ಥ್ಯ ಹೆಚ್ಚುತ್ತದೆ. ಅವರಲ್ಲಿ ಸಕಾರಾತ್ಮಕತೆ ಹೆಚ್ಚಳವಾಗುತ್ತದೆ. ಆರೋಗ್ಯದ ಕುರಿತು ಮಾಹಿತಿ ದೊರೆಯುತ್ತದೆ. ಸ್ವಚ್ಛತೆಯ ಅರಿವು ಮೂಡುತ್ತದೆ. ಹೀಗೆ ಈ ಶಿಬಿರದಿಂದ ಜನರಿಗೆ ಬಹಳಷ್ಟು ಅನುಕೂಲವಿದೆ ಎಂದರು.

ಈ ಆರೋಗ್ಯ ಶಿಬಿರದಲ್ಲಿ ಆರೋಗ್ಯ ಉಪಕೇಂದ್ರ, ತಾಜಪುರ ಹೆಚ್ ಮತ್ತು ವಿಜಯಪುರದ ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಶನ್ ವೈದ್ಯರು ಹಾಜರಾಗಿ ಕೂಲಿಕಾರರ ಆರೋಗ್ಯ ತಪಾಸಣೆ ನಡೆಸಿದರು.

ಈ ಸಂದರ್ಭದಲ್ಲಿ ತಾಲೂಕು ಮಾಹಿತಿ, ಶಿಕ್ಷಣ ಮತ್ತು ಸಂವಹನ ಸಂಯೋಜಕ ಕಲ್ಲಪ್ಪ ನಂದರಗಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಚಂದ್ರಶೇಖರ ಬಿದರಿ, ಸಹಾಯಕ ಅಭಿಯಂತರರಾದ ಶ್ರೀಧರ ಸಾವಳಗಿ, ವಿಜಯಪುರದ ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಶನ್ ನ ಸುಮಂಗಲಾ ಬೇನಾಳ, ರಾಘವೇಂದ್ರ ಪೂಜಾರಿ, ಆರೋಗ್ಯ ಉಪಕೇಂದ್ರದ ಕೆ.ವಾಯ್.ಕುಂಬಾರ, ಡಿಇಓ ಹಾಜಿಸಾಬ ಮುಲ್ಲಾ, ಕಾಯಕ ಬಂಧು ಹನಮಂತ ಕಬ್ಬೂರ, ಗ್ರಾಮ ಪಂಚಾಯತಿಯ ಇಬ್ರಾಹಿಂ ಮೊಕಾಶಿ, ರಾಜಕುಮಾರ ಮಸೂತಿ ಸೇರಿದಂತೆ ಇತರರು ಇದ್ದರು.

# ಕುಡುತಿನಿ ಭೂ ಸಂತ್ರಸ್ತರ ಬಂದ್ ಕರೆ: ನಗರದಲ್ಲಿ ಮೆರವಣಿಗೆ, ರಾಯಲ್ ವೃತ್ತದಲ್ಲಿ ಧರಣಿ




**ಬೆಳಗಾವಿ ವಾರ್ತೆ ಬಳ್ಳಾರಿ:** ಕುಡುತಿನಿ ಭೂ ಸಂತ್ರಸ್ತ ರೈತರು ನ್ಯಾಯಯುತ ಹಾಗೂ ಹೆಚ್ಚುವರಿ ಪರಿಹಾರಕ್ಕೆ ಆಗ್ರಹಿಸಿ ನೀಡಿದ್ದ ಬಳ್ಳಾರಿ ಬಂದ್ ಕರೆಯ ಹಿನ್ನೆಲೆಯಲ್ಲಿ ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿದ ರೈತರು ರಾಯಲ್ ವೃತ್ತದಲ್ಲಿ ಜಮಾಯಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಸುಮಾರು ಹದಿನೈದು ವರ್ಷಗಳ ಹಿಂದೆ ಕುಡುತಿನಿ ಸಮೀಪದ 10 ಸಾವಿರ ಎಕರೆಗೂ ಹೆಚ್ಚು ಭೂಮಿಯನ್ನು ಕೈಗಾರಿಕಾ ಉದ್ದೇಶಕ್ಕಾಗಿ ವಶಪಡಿಸಿಕೊಳ್ಳಲಾಗಿತ್ತು. ಆಗ ನೀಡಿದ ಪರಿಹಾರ ಅವೈಜ್ಞಾನಿಕವಾಗಿದ್ದು, ಭೂಮಿಯ ನೈಜ ಮೌಲ್ಯಕ್ಕೆ ತಕ್ಕಂತೆ ಹೆಚ್ಚುವರಿ ಪರಿಹಾರ ನೀಡಬೇಕು ಎಂದು ರೈತರು ಒತ್ತಾಯಿಸಿದರು.

ಈ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಕುಡುತಿನಿಯಲ್ಲಿ ಕಳೆದ 1500 ದಿನಗಳಿಂದ ಅನಿರ್ದಿಷ್ಟಾವಧಿ ಹೋರಾಟ ನಡೆಯುತ್ತಿದೆ. ಉಪಚುನಾವಣೆ ವೇಳೆ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಂಸದ ಇ. ತುಕಾರಾಂ ಹಾಗೂ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಸೇರಿದಂತೆ ಹಲವು ನಾಯಕರು ಸಮಸ್ಯೆ ಪರಿಹರಿಸುವ ಭರವಸೆ ನೀಡಿದ್ದರು. ಆದರೆ ಭರವಸೆಗಳು ಈಡೇರದ ಕಾರಣ ರೈತರು ಮತ್ತೆ ಹೋರಾಟದ ಹಾದಿ ಹಿಡಿದಿದ್ದಾರೆ ಎಂದು ಪ್ರತಿಭಟನಾಕಾರರು ತಿಳಿಸಿದರು.

ಇನ್ನೊಂದೆಡೆ ಬಳ್ಳಾರಿ ಬಂದ್‌ಗೆ ಕರೆ ನೀಡಲಾಗಿದ್ದರೂ, ಬಂದ್ ಪರಿಣಾಮ ಸೀಮಿತವಾಗಿದ್ದು ಜನಜೀವನ ಎಂದಿನಂತೆ ಸಾಗಿತು. ವ್ಯಾಪಾರ-ವಹಿವಾಟು, ಸಂಚಾರ ಹಾಗೂ ಸರ್ಕಾರಿ ಕಚೇರಿಗಳ ಕಾರ್ಯಚಟುವಟಿಕೆಗಳಲ್ಲಿ ಯಾವುದೇ ವ್ಯತ್ಯಯ ಕಂಡುಬರಲಿಲ್ಲ. ರೈತರ ಪ್ರತಿಭಟನೆ ಮಾತ್ರ ಪ್ರಮುಖವಾಗಿ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಯು ಬಸವರಾಜ್, ಸತ್ಯ ಬಾಬು ಮಾಧವ ರೆಡ್ಡಿ, ಕುಡುತೀನಿ ಆನಂದ್ ಕುಮಾರ್ ಪ್ರಜಾ ಪರಿವರ್ತನೆ ವೇದಿಕೆ ಜಿಲ್ಲಾಧ್ಯಕ್ಷರು ,ದೇವದಾಸ್,ಸಂಗಣಕಲ್ ಕೃಷ್ಣಪ್ಪ, ಆಡಿ ಪ್ರಮೋದ್,ಚಾಣಪ್ಪ, ಕೃಷ್ಣಪ್ಪ, ಜಂಗ್ಲಿಸಾಬ್, ಬಾಬು, ರಮೇಶ್, ಹುಸೇನ್ನಪ್ಪ, ಸೇರಿದಂತೆ ನೂರಾರು ರೈತರು ಬಳ್ಳಾರಿ ಬಂಧನಲ್ಲಿ ಭಾಗವಹಿಸಿದ್ದರು.



# ಶ್ರೀಧರಗಡ್ಡೆ ಬೇಕರಿ ವೃತ್ತದಲ್ಲಿ ಭೀಕರ ಅಪಘಾತ: ಬ್ರೇಕರ್ ಅಳವಡಿಕೆಗೆ ಗ್ರಾಮಸ್ಥರ ಒತ್ತಾಯ



**ಬೆಳಗಾವಿ ವಾರ್ತೆ ಬಳ್ಳಾರಿ:** ಬಳ್ಳಾರಿ ತಾಲೂಕಿನ ಶ್ರೀಧರಗಡ್ಡೆ ಗ್ರಾಮದ ಬೇಕರಿ ವೃತ್ತದ ಸಮೀಪ ರಸ್ತೆ ಬ್ರೇಕರ್‌ಗಳ ಕೊರತೆಯಿಂದ ಎರಡು ದ್ವಿಚಕ್ರ ವಾಹನಗಳು ಮುಖಾಮುಖಿ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದೆ.

ದಮ್ಮೂರು ಮತ್ತು ಕೊಳಗಲ್ ಗ್ರಾಮದ ಮೂಲದ ದ್ವಿಚಕ್ರ ವಾಹನ ಸವಾರರು ಪರಸ್ಪರ ಡಿಕ್ಕಿ ಹೊಡೆದ ಪರಿಣಾಮ, ಕೊಳಗಲ್ ಗ್ರಾಮದ ಓರ್ವ ವಾಹನ ಸವಾರ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಶ್ರೀಧರಗಡ್ಡೆ ಗ್ರಾಮದಿಂದ ತಾಳೂರು ಕಡೆಗೆ ಹಾಗೂ ಶ್ರೀಧರಗಡ್ಡೆ ಗ್ರಾಮದಿಂದ ಸಿರಿವಾರ ಕಡೆಗೆ ವಾಹನ ಸಂಚಾರ ಹೆಚ್ಚಿರುವ ಈ ರಸ್ತೆಯಲ್ಲಿ, ವಿಶೇಷವಾಗಿ ಭಾರೀ ಲಾರಿಗಳ ಓಡಾಟ ಹೆಚ್ಚಿರುವುದರಿಂದ ಅಪಘಾತಗಳು ಪದೇ ಪದೇ ಸಂಭವಿಸುತ್ತಿವೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಶ್ರೀಧರಗಡ್ಡೆ ಗ್ರಾಮದ ಮುಖ್ಯ ರಸ್ತೆಯ ಬೇಕರಿ ವೃತ್ತದ ಬಳಿ ತಕ್ಷಣವೇ ರಸ್ತೆ ಬ್ರೇಕರ್‌ಗಳನ್ನು ಅಳವಡಿಸಿ ಸಾರ್ವಜನಿಕರ ಸುರಕ್ಷತೆಗೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಪತ್ರಿಕಾ ಮಾಧ್ಯಮದ ಮೂಲಕ ಆಗ್ರಹಿಸಿದ್ದಾರೆ.

# ಹೆದ್ದಾರಿ ಕಾಮಗಾರಿ ಪೂರ್ಣಗೊಳಿಸಿ ಸಂಚಾರ ಕಿರಿಕಿರಿ ತಪ್ಪಿಸಿ

**ಬೆಳಗಾವಿ ವಾರ್ತೆ ವಿಜಯನಗರ(ಹೊಸಪೇಟೆ):** ರಾಷ್ಟ್ರೀಯ ಹೆದ್ದಾರಿ ರಸ್ತೆ ನಿರ್ಮಾಣ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಿ ವಾಹನ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡುವ ಮೂಲಕ ಸಂಚಾರ ಕಿರಿಕಿರಿ ತಪ್ಪಿಸುವಂತೆ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ನಿರ್ದೇಶಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಹಾಗೂ ರಾಷ್ಟ್ರೀಯ ಹೆದ್ದಾರಿ ವಲಯಗಳ ವತಿಯಿಂದ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ರಸ್ತೆ ನಿರ್ಮಾಣ ಕಾಮಗಾರಿಗಳಲ್ಲಿ ಭೂಸ್ವಾಧೀನ ಮತ್ತು ಅರಣ್ಯ ಇಲಾಖೆ ತೀರುವಳಿಗಳಿಗೆ ಸಂಬಂಧಿಸಿದ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹೆದ್ದಾರಿ ಕಾಮಗಾರಿ ಪ್ರಗತಿಗೆ ಇರುವ ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದ್ದು, ಯಾವುದೇ ಗೊಂದಲ ಸಮಸ್ಯೆಗಳೂ ಇಲ್ಲ. ಆದರೂ ಕೆಲವೆಡೆ ಕಾಮಗಾರಿಗೆ ಹಿನ್ನೆಡೆಯಾಗುತ್ತಿರುವುದು ಸಾರ್ವಜನಿಕರಲ್ಲಿ ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಹೆದ್ದಾರಿ ನಿರ್ಮಾಣವಾಗುತ್ತಿರುವ ಜಾಗಗಳಲ್ಲಿ ಕೆಲವೆಡೆ ಸಮರ್ಪಕ ಸರ್ವಿಸ್ ರಸ್ತೆಗಳಿಲ್ಲದೆ ಸ್ಥಳೀಯ ಗ್ರಾಮಸ್ಥರು ತೊಂದರೆ ಅನುಭವಿಸುತ್ತಿದ್ದಾರೆ. ಕೆಲವೆಡೆ ಸರ್ವಿಸ್ ರಸ್ತೆಗಳಿದ್ದರೂ ಸಹ ಅವೈಜ್ಞಾನಿಕವಾಗಿದ್ದು, ನೇರವಾಗಿ ಮುಖ್ಯ ರಸ್ತೆಗೆ ಸಂಪರ್ಕ ಹೊಂದಿಕೊಂಡಿವೆ. ಇದರಿಂದ ಸಾಕಷ್ಟು ಅಪಘಾತ ಪ್ರಕರಣ ದಾಖಲಾಗಿರುವ ಕುರಿತು ದೂರುಗಳು ಇವೆ. ಆದ್ದರಿಂದ ಅಂತಹ ಅವೈಜ್ಞಾನಿಕ ಸ್ಥಳ ಗುರುತಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಅದಲ್ಲದೇ ಅಗತ್ಯವಿರುವೆಡೆ ಸೂಚನಾ ಫಲಕ, ಬ್ಯಾರಿಕೇಡ್ ಹಾಗೂ ರಾತ್ರಿ ವೇಳೆ ಎಚ್ಚರಿಕೆ ಬ್ಲಿಂಕರ್ ಸೋಲಾರ್ ವಿದ್ಯುತ್ ದೀಪ ಅಳವಡಿಸುವುದರ ಜೊತೆಗೆ ವೈಜ್ಞಾನಿಕವಾಗಿ ಸರ್ವಿಸ್ ರಸ್ತೆ ಹಾಗೂ ಅಂಡರ್‌ಪಾಸ್ ನಿರ್ಮಿಸಬೇಕು ಎಂದು ತಾಕೀತು ಮಾಡಿದರು.

ಜಿಲ್ಲೆಗೆ ಸಂಪರ್ಕ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳ ಪೈಕಿ ಡಣಾಪುರ ವ್ಯಾಪ್ತಿಯಲ್ಲಿ 1 ಹಾಗೂ ಆಲೂರು ಬಳಿ 2 ಮುಖ್ಯ ಸೇತುವೆ ಸೇರಿ ಒಟ್ಟು 3 ಮುಖ್ಯ ಸೇತುವೆ ಕಾಮಗಾರಿ ನಿಗಧಿತ ಕಾಲ ಮಿತಿಯೊಳಗೆ ಪೂರ್ಣಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದ ಅವರು, ಕಮಲಾಪುರ, ವೆಂಕಟಾಪುರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಳೆದ ಆರು ತಿಂಗಳಲ್ಲಿ ಮೂರು ಚಿರತೆಗಳು ರಸ್ತೆ ಅಪಘಾತದಿಂದ ಸಾವನ್ನಪ್ಪಿವೆ. ಆದ್ದರಿಂದ ವನ್ಯಜೀವಿ ಸಂರಕ್ಷಿಸಿ ಪ್ರಾಣ ಹಾನಿ ತಪ್ಪಿಸಲು ಹೆದ್ದಾರಿಗೆ ಬ್ಯಾರಿಕೇಡ್ ಅಳವಡಿಸಲು ಸೂಚಿಸಿದ ಅವರು, ಕಾಮಗಾರಿಗಾಗಿ ಕಡಿಯಲಾದ ಮರಗಳಿಗೆ ಪರ್ಯಾಯವಾಗಿ ಹೆದ್ದಾರಿಯ ಇಕ್ಕೆಲಗಳಲ್ಲಿ ಕಡ್ಡಾಯವಾಗಿ ಹೊಸ ಗಿಡಗಳನ್ನು ನೆಟ್ಟು ಪೋಷಿಸಬೇಕು ಎಂದು ಹೆದ್ದಾರಿ ಪ್ರಾಧಿಕಾರಕ್ಕೆ ನಿರ್ದೇಶನ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಸಕರಾತ್ಮಕವಾಗಿ ಸ್ಪಂದಿಸಿದರು.



ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ, ಡಿವೈಎಸ್ಪಿ ಪಿ.ಮುರಳೀಧರ, ಉಪ ವಿಭಾಗಾಧಿಕಾರಿ ವಿವೇಕಾನಂದ, ಪ್ರಾದೇಶಿಕ ಸಾರಿಗೆ ಅಧಿಕಾರಿ ದಾಮೋದರ ಹಾಗೂ ಗುತ್ತಿಗೆದಾರರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

# ಮೂಲಭೂತ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಪ್ರತಿಭಟನೆ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ವಾರ್ಡ್ ನಂ. 3ರಲ್ಲಿ ಉಂಟಾಗಿರುವ ಕುಡಿಯುವ ನೀರು, ಕಾಲುವೆ ಸ್ವಚ್ಛತೆ, ಬೀದಿ ದೀಪಗಳ ನಿರ್ವಹಣೆ ಹಾಗೂ ಸಾರ್ವಜನಿಕ ಶೌಚಾಲಯ ಸೇರಿದಂತೆ ವಿವಿಧ ಮೂಲಸೌಕರ್ಯ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಆಗ್ರಹಿಸಿ ಸಾರ್ವಜನಿಕರು ಹಾಗೂ ಸಮಗ್ರ ರೈತ ಹೋರಾಟ ಸಮಿತಿ ಸದಸ್ಯರು ಲಕ್ಷ್ಮೇಶ್ವರ ಪುರಸಭೆ ಮುಂದೆ ಪ್ರತಿಭಟನೆ ಮಾಡಿದರು. ಪ್ರತಿಭಟನೆಯಲ್ಲಿ ಕುಂದಗೋಳ ಅಭಿನವಬಸವಣ್ಣ ಶ್ರೀಗಳು, ದುಮ್ಮವಾಡ ಸರ್ಪಭೂಷಣ ಶ್ರೀಗಳು ಭಾಗವಹಿಸಿ ಬೆಂಬಲ ವ್ಯಕ್ತಪಡಿಸಿದರು.

ಪಟ್ಟಣದ ಕೆಂಚಲಾಪುರ ಓಣಿಯಿಂದ ಎತ್ತು, ಆಕಳು, ಕೊಡಪಾನ, ಚರಗಿ, ಪೊರಕೆ ಹಿಡಿದು ವಾದ್ಯಮೇಳದೊಂದಿಗೆ ಮುಖ್ಯ ಬಜಾರ್ ರಸ್ತೆಯ ಮೂಲಕ ಪುರಸಭೆಯ ವಿರುದ್ಧ ಘೋಷಣೆ ಕೂಗುತ್ತಾ, ಬಿತ್ತಿಪತ್ರ ಹಿಡಿದು ಪುರಸಭೆಯ ಮುಂದೆ ಘೋಷಣೆ ಕೂಗಿದರು. ಈ ವೇಳೆ ಆಕಳುಗಳನ್ನು ಪುರಸಭೆಯ ಕಂಪೌಂಡ ಒಳಗೆ ಬಿಡದಂತೆ ತದ ಪೊಲೀಸರ ವಿರುದ್ಧ ಹೋರಾಟಗಾರರು ವಾಗ್ವಾದಕ್ಕಿಳಿದರು.

ಬಳಿಕ ಪ್ರತಿಭಟನಾ ಸಭೆಯನ್ನುದ್ದೇಶಿಸಿ ಮಾತನಾಡಿದ ಸಮಗ್ರ ರೈತಪರ ಹೋರಾಟ ವೇದಿಕೆ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಪಟ್ಟಣಕ್ಕೆ ತಿಂಗಳಿಗೊಮ್ಮೆ ನೀರು ಬರುತ್ತದೆ. ಪದೇ ಪದೇ ನದಿ ನೀರಿನ ಪೈಪಲೈನ್ ದುರಸ್ಥಿ, ವಿದ್ಯುತ್ ವ್ಯತ್ಯಯ ಕಾರಣ ಹೇಳಲಾಗುತ್ತಿದೆ. ಇದ್ದ ನೂರಾರು ಕೊಳವೆ ಬಾವಿಗಳ ಸ್ಥಿತಿ ಏನಾಗಿದೆ ? ಪಂಪಸೆಟ್ ದುರಸ್ಥಿ ಮಾಡಿಸಬೇಕು, ಅನಿವರ್ಯವಾದಲ್ಲಿ ಟ್ಯಾಂಕರ್ ಮೂಲಕ ನೀರು ಕೊಡಬೇಕು. ನಿತ್ಯ ಕೂಲಿ ಮಾಡಿಯೇ ಬದುಕುವ ನೂರಾರು ಬಡ ಕುಟುಂಬಗಳು ಕೆಲಸ ಬಿಟ್ಟು ನೀರು ತರಲು ಪರದಾಡುತ್ತಿದ್ದಾರೆ. ವಿಶೇ?ವಾಗಿ ಹಳ್ಳದಕೇರಿ ಪ್ರದೇಶದಲ್ಲಿ ಶೇಕಡಾ 90ರ?ು?? ರೈತ ಕುಟುಂಬಗಳು ವಾಸವಾಗಿದ್ದು, ಕೃಷಿ ಹಾಗೂ ಜಾನುವಾರುಗಳ ಮೇಲೆಯೇ ಜೀವನ ನಿರ್ವಹಿಸುತ್ತಿವೆ. ಜೋನ್ ಹಳ್ಳದಿಂದ ಲಂಡಿ ಹಳ್ಳದುದ್ದಕ್ಕೂ ದೊಡ್ಡ ಗಿಡಗಂಟಿಗಳು, ಆಪು ಬೆಳೆದು ಕೆಸರು ತುಂಬಿಕೊಂಡಿದೆ. ಸಾರ್ವಜನಿಕರು ಹಾಗೂ ಜಾನುವಾರುಗಳಿಗೆ ವಿಷಜಂತುಗಳ ಕಾಟ ಹೆಚ್ಚಾಗಿದೆ. ಈ ಬಗ್ಗೆ ಗಮನ ಹರಿಸಬೇಕು ಎಂದು ಪುರಸಭೆಗೆ ಅನೇಕ ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜವಾಗಿಲ್ಲ. ಆದರೆ ಪ್ರತಿಭಟನೆ ಮಾಡುತ್ತೇವೆ ಎಂದು ಗೊತ್ತಾಗುತ್ತಿದ್ದಂತೆಯೇ ಸ್ವಚ್ಛತೆ, ನೀರು ಸರಬರಾಜು, ಬೆಳಕಿನ ವ್ಯವಸ್ಥೆ ಕಲ್ಪಿಸುವ ತ್ವರಿತ ಕೆಲಸ ಮಾಡಿದರು. ಹೋರಾಟದಿಂದ ಮಾತ್ರ ಅಧಿಕಾರಿಗಳು ಎಚ್ಚತ್ತುಕೊಳ್ಳುತ್ತಾರೆ ಎಂಬ ಮನಸ್ಥಿತಿಗೆ ಜನರು ಬರುಂತಾಗಿದೆ. ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾ ಮಟ್ಟದ ಅಧಿಕಾರಿಗಳು ಬರುವವರೆಗೂ ಪ್ರತಿಭಟನೆ ಮುಂದುವರೆಸುತ್ತೇವೆ ಎಂದು ಪಟ್ಟ ಹಿಡಿದು ಕುಳಿತಳು . ಸ್ಥಳಲ್ಲಿಯೇ ಪ್ರತಿಭಟನಾ ನಿರತರಿಗೆ ಉಪಹಾರದ ವ್ಯವಸ್ಥೆ ಮಾಡಲಾಯಿತು.

ಸಂಜೆ 4 ಕ್ಕೆ ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ ಆಗಮಿಸುತ್ತಿದ್ದಂತೆಯೇ ಪ್ರತಿಭಟನಾ ನಿರತರು ಘೋಷಣೆ ಕೂಗಿದರು. ಹಳ್ಳಕ್ಕೆ ತುರ್ತಾಗಿ ಕಲ್ವರ್ಟ್ ನಿರ್ಮಾಣ ಮಾಡಬೇಕು ಹಾಗೂ ಬೀದಿ ದೀಪ, ಸಾರ್ವಜನಿಕ ನಲ್ಲಿ, ಶೌಚಾಲಯ ಸೌಲಭ್ಯ ಕಲ್ಪಿಸಬೇಕು. ಅಲ್ಲದೇ ಈ ಪ್ರದೇಶದಲ್ಲಿ ನಿರ್ಮಾಣಗೊಂಡ ಬಾಲಕರ ವಸತಿ ನಿಲಯಕ್ಕೆ ಪ್ರತ್ಯೇಕ ಬೋರ್‌ವೆಲ್ ವ್ಯವಸ್ಥೆ ಕಲ್ಪಿಸುವ ಯೋಜನೆ ಇದ್ದರೂ ಅದನ್ನು ಅನು??ನಗೊಳಿಸದೇ ಸಾರ್ವಜನಿಕ ಸೌಲಭ್ಯವನ್ನು ಬೇರೆಡೆಗೆ ವರ್ಗಾಯಿಸಿರುವುದಾಗಿ ಪ್ರತಿಭಟನಾಕಾರರು ಆರೋಪಿಸಿದರು.

ನಾಗರಾಜ ಚಿಂಚಲಿ ಮಾತನಾಡಿ, ಪಟ್ಟಣದಲ್ಲಿ ಹಲವು ವರ್ಷಗಳಿಂದ ನೀರು, ಸ್ವಚ್ಛತೆ, ಆಶ್ರಯ ನಿವೇಶನ, ರಸ್ತೆ ಸಮಸ್ಯೆ ಉಂಟಾಗಿದೆ. ಈ ನಿಟ್ಟಿನಲ್ಲಿ ಜನಪ್ರತಿನಿಧಿಗಳು ಪ್ರಾಮಾಣಿಕವಾಗಿ ಗಮನ ಹರಿಸಬೇಕು ಕೇವಲ ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಚಾರ ಗಿಟ್ಟಿಸಿಕೊಳ್ಳಲಷ್ಟೇ ಅಲ್ಲ ಎಂದರು.

ಈ ಎಲ್ಲ ಸಮಸ್ಯೆಗಳ ಬಗ್ಗೆ ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಅಹೋರಾತ್ರಿ ಸತ್ಯಾಗ್ರಹ ನಡೆಸಲಾಗಿದೆ ಎಂದು ಹೋರಾಟ ಸಮಿತಿ ಸದಸ್ಯರು ತಿಳಿಸಿದರು. ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಿ, ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಮನವಿ ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿದ ಪಿಡಿ ಬಸನಗೌಡ ಕೊಟೂರ ಅವರು ನಾಲ್ಕೈದು ದಿನಗಳಲ್ಲಿ ಈ ಪ್ರದೇಶದಲ್ಲಿ ಹೊಸ ಬೋರವೆಲ್ ಕೊರೆಸಲಾಗುವುದು, ಶೌಚಾಲಯ, ಸಾರ್ವಜನಿಕ ನಳ/ನಲ್ಲಿ ನಿರ್ಮಾಣಕ್ಕೆ ಆದಷ್ಟು ಬೇಗ ಕ್ರಮ ಕೈಗೊಳ್ಳಲಾಗುವುದು. ಪಟ್ಟಣದಲ್ಲಿ ಪ್ರಮುಖ ಮೂಲಭೂತ ಸೌಲಭ್ಯ ಕಲ್ಪಿಸುವಲ್ಲಿ ಅಧಿಕಾರಿಗಳು ಅತ್ಯಂತ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ಈ ಟಾಕಪ್ಪ ಸಾತಪುತೆ, ಮಲ್ಲಪ್ಪ ಅಂಕಲಿ, ದುಂಡಪ್ಪ ಕೋಟಗಿ, ಹೊನ್ನಪ್ಪ ವಡ್ಡರ, ಶಂಕರ ಬ್ಯಾಡಗಿ, ಶಿವಣ್ಣ ಕಟಗಿ, ಪ್ರಕಾಶ ಗುತ್ತಲ, ಫಕ್ಕೀರೇಶ ಭಜಂತ್ರಿ, ಮುತ್ತು ಬುರಡಿ, ಮಹಾಂತೇಶ ಉಮಚಗಿ, ಚಂದ್ರು ಮಾಗಡಿ, ಮಲ್ಲಿಕಾರ್ಜುನ ನೀರಾಲೋಟ, ಶಂಕ್ರಪ್ಪ ಬುರಡಿ, ಮಾರುದ್ರಪ್ಪ ಲಕ್ಕುಂಡಿ, ಫಕ್ಕೀರಪ್ಪ ರಾಯರ, ಸೋಮಣ್ಣ ಅಂಬಲಿ, ಹೇಮಣ್ಣ ಬುರಡಿ, ಶಿವಪ್ಪ ಹುಲಕೋಟಿ, ಗಂಗಾಧರ ಬೆಲ್ಲದ, ಮಂಜುನಾಥ ಸಂಶಿ, ನಾಗಪ್ಪ ಮುಳಗುಂದ, ಮಂಜುನಾಥ ಗೊರವರ, ಭರಮಗೌಡ ಹೆಬ್ಬಾಳ, ಗಣೇಶ ನೂಲ್ವಿ, ರಾಜಪ್ಪ ಕಣವಿ, ಅರುಣಾ ಕಣವಿ, ಶಾಂತವ್ವ ಪಗಡಿ, ಗಿರಿಜಮ್ಮ ಕರೆಯತ್ತಿನ, ಶಿವಣ್ಣ ಪಾಣಿಗಟ್ಟಿ, ಗೌರಮ್ಮ ಅಂಗಡಿ, ನೀಲಮ್ಮ ಹಣಗಿ, ಲಲಿತವ್ವ ಭಜಂತ್ರಿ, ವಿಜಕ್ಕ ಭಜಂತ್ರಿ, ಶಂಕ್ರವ್ವ ಭಜಂತ್ರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸಿಪಿಐ ಬಿ.ವಿ ನ್ಯಾಮಗೌಡ್ರ ಮತ್ತು ಪಿಎಸ್ಐ ನಾಗರಾಜ ಗಡಾದ, ಟಿ.ಕೆ ರಾಠೋಡ ಬಂದೋಬಸ್ತ ಏರ್ಪಡಿಸಿದ್ದರು.

# ಮೊಬೈಲ್ ಕಳ್ಳತನ; ವಾರಸುದಾರರಿಗೆ ಹಸ್ತಾಂತರ



**ಬೆಳಗಾವಿ ವಾರ್ತೆ ಘಟಪ್ರಭಾ:** ಮೊಬೈಲ್ ಕಳೆದುಕೊಂಡ ನಂತರ ಸಿಇಐಆರ್ ಪೋರ್ಟನಲ್ಲಿ ದೂರು ದಾಖಲಿಸಿದ 27 ಜನರ ಮೊಬೈಲ್‌ಗಳನ್ನು ಘಟಪ್ರಭಾ ಪೊಲೀಸ್ ಠಾಣೆಯ ಪೊಲೀಸರು ಪತ್ತೆ ಹಚ್ಚಿ ವಾರಸುದಾರರಿಗೆ ಬುಧವಾರದಂದು ನೀಡಿದ್ದಾರೆ. ಪೊಲೀಸ್ ಠಾಣೆಯ ಪಿಐ ಎಚ್.ಡಿ.ಮುಲ್ಲಾ ನೇತೃತ್ವದಲ್ಲಿ 27 ಮೊಬೈಲ್ ಕಳ್ಳರನ್ನು ಹುಡುಕಾಡಿ ಪತ್ತೆ ಹಚ್ಚಿ ವಾರಸುದಾರರಿಗೆ ಅವರ ಮೊಬೈಲ್‌ಗಳನ್ನು ವಾಪಸ ನೀಡಿದ್ದಾರೆ. ಘಟಪ್ರಭಾ ಪೊಲೀಸರ ಈ ಕಾಯಕ್ಕೆ ಸಾರ್ವಜನಿಕರರಿಂದ ಮೆಚ್ಚುಗೆ ವ್ಯಕ್ತವಾಗಿದೆ.

ಈ ಸಂದರ್ಭದಲ್ಲಿ ಪಿಐ ಎಚ್.ಡಿ.ಮುಲ್ಲಾ, ಪಿಎಸ್‌ಐಗಳಾದ ಎಸ್.ಆರ್.ಕಣವಿ, ಎಸ್.ಎ. ಜಮಖಂಡಿ, ಬಿ.ಎಸ್.ನಾಯಿಕ, ರಾಮಕೃಷ್ಣ ಗಿಡ್ಡಪ್ಪಗೋಳ, ಶ್ರೀಕಾಂತ ದೇವರ ಸೇರಿದಂತೆ ಪೋಲಿಸ ಸಿಬ್ಬಂದಿ ವರ್ಗದವರು ಇದ್ದರು.

# ಸಚಿವ ಸ್ಥಾನಕ್ಕಾಗಿ ಪ್ರತಿಭಟನೆ



**ಬೆಳಗಾವಿ ವಾರ್ತೆ ನವಲಗುಂದ:** ಉತ್ತರ ಕರ್ನಾಟಕ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಶಾಸಕ ಎನ್ ಎಚ್ ಕೋನರಡ್ಡಿ ಅವರಿಗೆ ಮುಂಬ ರುವ ಸಚಿವ ಸಂಪುಟ ವಿಸ್ತರಣೆಯಲ್ಲಿ ರೈತರ ಕೋಟಾದಡಿ ಕೃಷಿ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿ ಬುಧವಾರ ಪಟ್ಟಣದ ಗಣಪತಿ ದೇವಸ್ಥಾನದಿಂದ ತಹಶೀಲ್ದಾರ್ ಕಚೇರಿ ವರೆಗೆ ಅವರ ಅಭಿಮಾನಿಗಳು, ಕಾಂಗ್ರೆಸ್ ಕಾರ್ಯ ಕರ್ತರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಬೃಹತ್ ಪ್ರತಿಭಟನೆ ನಡೆಸಿದರು.

ಕೋನರಡ್ಡಿ ಅವರಿಗೆ ಸಚಿವ ಸಂಪುಟದಲ್ಲಿ ಜನಪರ ಕಾರ್ಯವನ್ನು ಪರಿಗಣಿಸಿ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಕ್ಷೇತ್ರದ ಎಲ್ಲ ರೈತರ, ನಾಯಕರ, ಕಾರ್ಯಕರ್ತರ, ಅಭಿಮಾನಿಗಳ ವಿನಂತಿ ಮನವಿಯಾಗಿದೆ ಕಾಂಗ್ರೆಸ್ ಪಕ್ಷದ ಎಲ್ಲ ಮುಖಂಡರಿಗೆ ಈ ಭಾಗದ ಜನತೆಯ ಪರವಾಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವರ್ಧಮಾನಗೌಡ ಹಿರೇಗೌಡ್ರ ಅವರು ಮನವಿ ಮಾಡಿದರು.

ನಂತರ ತಹಶೀಲ್ದಾರ್ ಕಚೇರಿ ಶಿರೇಸ್ತದಾರ ಗಣೇಶ ಚಳ್ಳಕೆರೆ ಅವರ ಮುಖಾಂತರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಮಾಜಿ ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಅವರಿಗೆ ಮನವಿ ಸಲ್ಲಿಸಿದರು.

ಅಣ್ಣಿಗೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಮಾಯಣ್ಣವರ, ನವಲಗುಂದ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೇಸ್ ಅಧ್ಯಕ್ಷ ವಿಕಾಸ ತದ್ದೆವಾಡಿ, ಶಿವಾನಂದ ಭೂಮಣ್ಣವರ, ಚಂದ್ರಣ್ಣ ಅಣ್ಣಿಗೇರಿ, ಆರ್.ಹೆಚ್.ಕೋನರಡ್ಡಿ, ಮುರಗ್ಯಜ್ಜ ವೀರಕ್ತಮಠ, ಡಿ.ಎನ್.ಪಾಟೀಲ, ಚಂಬಣ್ಣ ಹಾಳದೋಟರ, ಚಂದುಸಾಬ ನದಾಫ್, ಎಮ್.ಎಸ್.ರೋಣದ, ಮಾಜಿ ಜಿಲ್ಲಾಪಂಚಾತ ಅಧ್ಯಕ್ಷೆ ಶಾಂತವ್ವ ಗುಜ್ಜಲ, ನಂದಿನಿ ಹಾದಿಮನಿ, ಜೀವನ ಪವಾರ, ಮೋದಿನಸಾಬ ಶಿರೂರ, ಪ್ರಕಾಶ ಶಿಗ್ಲಿ, ಮಹಾಂತೇಶ ಭೋವಿ, ದಿಲೀಪ ನದಾಫ್ ಸೇರಿ ಸಾವಿರಾರು ಜನ ಪಾಲ್ಗೊಂಡಿದ್ದರು.

# ಪೋಕ್ಸೊ ಕಾಯಿದೆ & ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಕಾನೂನು ಅರಿವು ಕಾರ್ಯಕ್ರಮ



**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ಶ್ರೀಮತಿ ವಿದ್ಯಾ. ಪಿ. ಹಂಚಿನಮನಿ ಪದವಿ ಪೂರ್ವ ವಿಜ್ಞಾನ ಕಾಲೇಜು, ಧಾರವಾಡ ಇವರ ಸಂಯುಕ್ತಾಶ್ರಯದಲ್ಲಿ ಪೋಕ್ಸೊ ಕಾಯಿದೆ ಹಾಗೂ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾ ಮಗಳ ಕುರಿತು ಕಾನೂನು ಅರಿವು ಕಾರ್ಯಕ್ರಮವನ್ನು ಜೂನ್ 15 ರಂದು ಶ್ರೀಮತಿ ವಿದ್ಯಾ. ಪಿ. ಹಂಚಿನಮನಿ ಪದವಿ ಪೂರ್ವ ವಿಜ್ಞಾನ ಕಾಲೇಜಿನ ಕೊಠಡಿಯಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಅಧ್ಯಕ್ಷ ಎನ್.ವಿ.ವಿಜಯ, ಅವರು ಸಸಿಗೆ ನೀರು ಹಾಕುವುದರ ಮೂಲಕ ಕಾರ್ಯಕ್ರಮದ ಉದ್ಘಾಟನೆಯನ್ನು ನಡೆಸಿ, ಮಾದಕ ದ್ರವ್ಯ ವ್ಯಸನದಿಂದ ಇಂದಿನ ಯುವಕರ ಮೇಲೆ ಉಂಟಾಗುವ ದುಷ್ಪರಿಣಾಮದ ಕುರಿತು ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಜಿಲ್ಲಾ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಎಚ್. ಶಶಿಧರ ಶೆಟ್ಟಿ, ಅವರು ಭಾಗವಹಿಸಿ ಪೊಕ್ಸೋ ಕಾಯಿದೆಯ ಕುರಿತು ಮಾತನಾಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಅಲ್ಲಪ್ಪ ಎಂ ಬಡಿಗೇರ, ಶಾಲಾ ಶಿಕ್ಷಣ ಇಲಾಖೆಯ, ಉಮೇಶ ಬೊಮ್ಮಕ್ಕನವರ, ಮುಖ್ಯ ಅತಿಥಿಗಳಾಗಿ ಹಾಜರಿದ್ದರು.

ವಿ.ಪಿ.ಎಚ್ ಪಿಯು ಕಾಲೇಜು ಪ್ರಾಂಶುಪಾಲರಾದ ರಾಜು. ಎಸ್. ಕಡೆಮನಿ ಅವರು ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ, ಸಾರ್ವಜನಿಕ ಸಂಪರ್ಕ ಅಧಿಕಾರಿ ಬಾಲಸುಬ್ರಹ್ಮಣ್ಯ ಸೇರಿದಂತೆ ಕಾಲೇಜಿನ ಪ್ರಾಧ್ಯಾಪಕ ವೃಂದದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಹುಟ್ಟು ಹಬ್ಬ ಆಚರಣೆ; ಸರಳ ಸಮಾರಂಭ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಹೋಟೆಲ್ ಲೀಲಾವತಿ ಪ್ಯಾಲೇಸ್‌ನಲ್ಲಿ ಆಯೋಜಿಸಿದ್ದ ಸರಳ ಸಮಾರಂಭದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತರು, ಕ್ರೀಯಾಶೀಲ ಪತ್ರಕರ್ತರು, ಸಂಜೆ ಮಾಧ್ಯಮ ಹಾಗೂ ಇಂದು ಮುಂಜಾನೆ ಎಂಬ ಸಂಜೆ ಹಾಗೂ ಮುಂಜಾನೆ ದಿನಪತ್ರಿಕೆಯ ಸಂಪಾದಕರಾದ, ಹಿತೈಷಿಗಳು, ಆತ್ಮೀಯರಾದ ಗುರುರಾಜ ಹೂಗಾರ ಅವರ ಹುಟ್ಟು ಹಬ್ಬದ ನಿಮಿತ್ತ ಗುರುರಾಜ ಹೂಗಾರ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಶಾಲು, ಮಾಲಾರ್ಪಣೆ ಮಾಡಿ ಸಂತಸ ವ್ಯಕ್ತಪಡಿಸಿ, ಹುಟ್ಟು ಹಬ್ಬದ ಹಾರ್ದಿಕ ಶುಭಾಷಯ ಕೋರಿದರು. ಅಭಿನಂದನೆಗಳನ್ನು ತಿಳಿಸಿದ್ದಾರೆ.

ಖ್ಯಾತ ಹೋಟೆಲ್ ಉದ್ಯಮಿ ರಾಜೇಂದ್ರ ಶೆಟ್ಟಿ ಅವರು ಹುಬ್ಬಳ್ಳಿ ಧಾರವಾಡ ಬಂಟರ ಸಂಘದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಕ್ಕೆ ಕನ್ನಡ ರಾಜ್ಯೋತ್ಸವ ಶುಭ ಸಂದರ್ಭದಲ್ಲಿ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ವತಿಯಿಂದ ಧೀಮಂತ ಪ್ರಶಸ್ತಿ ಪುರಸ್ಕೃತರು, ಶ್ರೀ ಪಂಜುರ್ಲಿ ಗ್ರುಪ್ ಆಫ್ ಹೋಟೆಲ್ ಇಂಡಸ್ಟ್ರೀಸ್‌ನ ಸಂಸ್ಥಾಪಕರು, ಪುಣೆ, ಹುಬ್ಬಳ್ಳಿ ಧಾರವಾಡ, ದಾವಣಗೆರೆ, ಬೆಳಗಾವಿ ನಗರಗಳಲ್ಲಿ ಹತ್ತಾರು ಹೋಟೆಲ್ ಗಳನ್ನು ಪ್ರಾರಂಭ ಮಾಡಿ ಸಾವಿರಾರು ಜನರಿಗೆ ಉದ್ಯೋಗದ ಅವಕಾಶ ಕಲ್ಪಿಸಿರುವ ಹೋಟೆಲ್ ಕಾರ್ಮಿಕರ ಒಡೆಯನಾಗಿರುವ, ಆತ್ಮೀಯರು, ಗ್ರಾಹಕರಿಗೆ ಉತ್ತಮ ಗುಣಮಟ್ಟದ ವಿಶಿಷ್ಟ ಶುಚಿ, ರುಚಿಯಾದ ಆಹಾರ ತಿನಿಸುಗಳನ್ನು ತಯಾರಿಸಿ ಊಣ ಬಡಿಸಲು ಪಣ ತೊಟ್ಟಿರುವ ರಾಜೇಂದ್ರ ಶೆಟ್ಟಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಶಾಲು, ಮಾಲಾರ್ಪಣೆ ಮಾಡಿ ಗೌರವ ಪೂರ್ವಕವಾಗಿ ಶ್ರದ್ಧಾ ಭಕ್ತಿಯಿಂದ ಅಭಿನಂದನೆಗಳನ್ನು ಸಲ್ಲಿಸಲಾಯಿತು. ಹುತ್ಪೂರ್ವಕವಾಗಿ ಶುಭಾಶಯ ಕೋರಿದರು.

ಸೋಹನ್ ಸುರೇಶ ಹೊರಕೇರಿ, ಹಿರಿಯ ಪ್ರಾಧ್ಯಾಪಕರಾದ ಪ್ರೊ ಎಂ ಆರ್ ಪಾಟೀಲ, ಪತ್ರಕರ್ತರು, ಆತ್ಮೀಯರಾದ ಪ್ರಕಾಶ ಶೇಟ್, ಪ್ರಾದ್ಯಾಪಕ ಪ್ರೊ ವಿ ಎನ್ ಸನಗೌಡರ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ರಾಕೇಶ್, ಪವಿತ್ರಾ, ಮಂಗಳಾ, ಹೋಟೆಲ್ ಸಿಬ್ಬಂದಿ, ಇತರರು ಉಪಸ್ಥಿತರಿದ್ದರು.

# ಕರ್ನಾಟಕ ಉಚ್ಚ ನ್ಯಾಯಾಲಯ ಧಾರವಾಡ ಪೀಠದ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ




**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ಉಚ್ಚ ನ್ಯಾಯಾಲಯ ಧಾರವಾಡ ಪೀಠದಲ್ಲಿ ಉಚ್ಚ ನ್ಯಾಯಾಲಯದ ಕಾನೂನು ಸೇವಾ ಸಮಿತಿ, ಉಚ್ಚ ನ್ಯಾಯಾಲಯದ ವಕೀಲರ ಸಂಘ, ಅರಣ್ಯ ಇಲಾಖೆ ಮತ್ತು ತೋಟ ಗಾರಿಕಾ ಇಲಾಖೆ ಇವರ ಸಹಯೋಗದೊ ಂದಿಗೆ ನಿನ್ನೆ (ಜೂ.16) ವಿಶ್ವ ಪರಿಸರ ದಿನಾ ಚರಣೆ ನಿಮಿತ್ತ ವಿವಿಧ ತರಹದ ಸಸಿ ನೆಡುವ ಕಾರ್ಯಕ್ರಮವನ್ನು ಆಚರಿಸಲಾಯಿತು.

ಕಾರ್ಯಕ್ರಮವನ್ನು ಹಿರಿಯ ನ್ಯಾಯಮೂರ್ತಿ ಎಸ್. ಸುನಿಲ್ ದತ್ ಯಾದವ್ ಅವರು ಧಾರವಾಡ ಪೀಠದ ಆವರಣದಲ್ಲಿ ಗಿಡ ನೆಡುವುದರ ಮೂಲಕ ಚಾಲನೆಯನ್ನು ನೀಡಿದರು. ಅವರೊಂದಿಗೆ ಸಹ ನ್ಯಾಯಮೂರ್ತಿ ಹೆಚ್. ಟಿ. ನರೇಂದ್ರ ಪ್ರಸಾದ, ಸಚಿನ ಶಂಕರ ಮಗದುಮ್, ಅನಂತ ರಾಮನಾಥ ಹೆಗಡೆ, ಸಿ.ಎಮ್. ಪೂನಚ್ಚ, ಗೀತಾ ಕೆ. ಬಿ., ಬಿ. ಮುರಳಿಧರ ಪೈ, ರಾಜೇಶ್ವರಿ ಎನ್. ಹೆಗಡೆ, ಕೆ. ಜಿ. ಶಾಂತಿ ಹಾಗೂ ಅಧೀಕ ವಿಲೇಖನಾಧಿಕಾರಿಗಳು, ವಕೀಲರ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯಕಾರಿ ಸಮತಿ ಸದಸ್ಯರು, ಅಡಿಷನಲ್ ಅಡ್ವೋಕೆಟ್ ಜನರಲ್, ಅರಣ್ಯ ಇಲಾಖೆ ಮತ್ತು ತೋಟಗಾರಿಕಾ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

# ಮೇ & ಜೂನ್ ಮಾಹೆಯ ಪಡಿತರ ವಿತರಣೆ

**ಬೆಳಗಾವಿ ವಾರ್ತೆ ಬಾಗಲಕೋಟೆ,:** ಸಾರ್ವಜನಿಕ ವಿತರಣಾ ಪದ್ಧತಿಯಡಿ ಅಂತ್ಯೋದಯ ಹಾಗೂ ಬಿಪಿಎಲ್ ಪಡಿತರ ಚೀಟಿಯ ಫಲಾನುಭವಿಗಳಿಗೆ ಜೂನ್-2026 ಮಾಹೆಯಲ್ಲಿ ಅನ್ನಭಾಗ್ಯ ಯೋಜನೆಯಡಿ ಮೇ ಹಾಗೂ ಜೂನ್-2026 ಮಾಹೆಯ ಅಕ್ಕಿಯನ್ನು ಒಟ್ಟಿಗೆ ವಿತರಿಸಲಾಗುತ್ತಿದೆ.

ಅಂತ್ಯೋದಯ (ಎಎವೈ) ಪಡಿತರ ಚೀಟಿದಾರರಿಗೆ 4 ಸದಸ್ಯರಿರುವ ಪ್ರತಿ ಕಾರ್ಡಗೆ 10 ಕೆಜಿ ಅಕ್ಕಿ, 5 ಸದಸ್ಯರಿರುವ ಕಾರ್ಡಗೆ 30 ಕೆಜಿ, 6 ಸದಸ್ಯರಿರುವ ಕಾರ್ಡಗೆ 50 ಕೆಜಿ, 7 ಸದಸ್ಯರಿರುವ ಕಾರ್ಡಗೆ 70 ಕೆಜಿ, 8 ಸದಸ್ಯರಿರುವ ಕಾರ್ಡಗೆ 90 ಕೆಜಿ, 9 ಸದಸ್ಯರಿರುವ ಕಾರ್ಡಗೆ 110 ಕೆಜಿ, 10 ಸದಸ್ಯರಿರುವ ಕಾರ್ಡಗೆ 130 ಕೆಜಿ ಅಕ್ಕಿಯನ್ನು ವಿತರಿಸಲಾಗುತ್ತದೆ. ಆದ್ಯತಾ (ಪಿಎಚ್‌ಎಚ್, ಬಿಪಿಎಲ್) ಕಾರ್ಡದಾರರಿಗೆ ಕೇಂದ್ರ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 10 ಕೆಜಿ ಅಕ್ಕಿ ಹಾಗೂ ರಾಜ್ಯ ಪಡಿತರ ಚೀಟಿಯ ಪ್ರತಿ ಕಾರ್ಡಗೆ 10 ಕೆಜಿ ಅಕ್ಕಿಯನ್ನು ಉಚಿತವಾಗಿ ನೀಡಲಾಗುತ್ತದೆ.

ಈ ಮಾಹೆಯ ಕೊನೆಯವರೆಗೆ ಬೆಳಿಗ್ಗೆ 6 ರಿಂದ ರಾತ್ರಿ 10 ಗಂಟೆಯೊಳಗಾಗಿ ನ್ಯಾಯಬೆಲೆ ಅಂಗಡಿಯನ್ನು ತೆರೆದು ಸರಿಯಾದ ಪ್ರಮಾಣದಲ್ಲಿ ಪಡಿತರ ವಿತರಣೆ ಮಾಡತಕ್ಕದ್ದು. ಒಂದು ವೇಳೆ ಲೋಪದೋಷ ಕಂಡುಬಂದಲ್ಲಿ ನ್ಯಾಯಬೆಲೆ ಅಂಗಡಿಕಾರರ ಮೇಲೆ ನಿರ್ದಾಕ್ಷಣ್ಯವಾಗಿ ಕ್ರಮೈಗೊಳ್ಳಲಾಗುತ್ತದೆ. ಒಂದು ಬಾರಿ ಮಾತ್ರ ಬಯೋ ನೀಡಿದರೆ ಸಾಕು. ತಮಗೆ ಹಂಚಿಕೆಯಾದ ಆಹಾರಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಅಂತವರ ಪಡಿತರ ಚೀಟಿಯನ್ನು ರದ್ದುಪಡಿಸಲು ಕ್ರಮಕೈಗೊಳ್ಳಲಾಗುವುದು. ಈ ಕುರಿತು ದೂರುಗಳು ಇದ್ದಲ್ಲಿ ಪೊಲೀಸ್ ಇಲಾಖೆ ಸಹಾಯವಾಣಿ 112, ಮೊನಂ.9480803900 ಹಾಗೂ ಆಹಾರ ಇಲಾಖೆಯ ಸಹಾಯವಾಣಿ 1967, ದೂಸಂ.08354-235094 ಕರೆ ಮಾಡಿ ದೂರು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001